ಸಂಪುಟ 01 । ಸಂಚಿಕೆ 221 । ಮಂಗಳವಾರ 07 ಜುಲೈ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ವಿಶ್ವ ಚಾಕೊಲೇಟ್ ದಿನ (World Chocolate Day)**
ಪ್ರತಿವರ್ಷ ಜುಲೈ 7ರಂದು ವಿಶ್ವದಾದ್ಯಂತ ವಿಶ್ವ ಚಾಕೊಲೇಟ್ ದಿನವನ್ನು ಆಚರಿಸಲಾಗುತ್ತದೆ. ಚಾಕೊಲೇಟ್‌ನ ಇತಿಹಾಸ, ಅದರ ಜನಪ್ರಿಯತೆ ಹಾಗೂ ಸಂತೋಷವನ್ನು ಹಂಚಿಕೊಳ್ಳುವ ಉದ್ದೇಶದಿಂದ ಈ ದಿನವನ್ನು ಆಚರಿಸಲಾಗುತ್ತದೆ.

**2) ಜಾಗತಿಕ ಕ್ಷಮೆಯ ದಿನ (Global Forgiveness Day):**
ಇದನ್ನು ಅಂತರರಾಷ್ಟ್ರೀಯ ಕ್ಷಮೆ ದಿನ ಎಂದೂ ಕರೆಯಲಾಗುತ್ತದೆ. ಇದು ಜಾಗತಿಕ ಮಟ್ಟದಲ್ಲಿ ಪರಸ್ಪರ ತಪ್ಪುಗಳನ್ನು ಕ್ಷಮಿಸುವ ಮತ್ತು ಶಾಂತಿಯನ್ನು ಹರಡುವ ಮಹತ್ವವನ್ನು ಸಾರುತ್ತದೆ.

**3) ಮಹೇಂದ್ರ ಸಿಂಗ್ ಧೋನಿ ಅವರ ಜನ್ಮದಿನ (ms dhoni)**
ಜನ್ಮದಿನವನ್ನು ಪ್ರತಿವರ್ಷ ಜುಲೈ 7ರಂದು ಭಾರತದ ಕೋಟ್ಯಂತರ ಕ್ರಿಕೆಟ್ ಅಭಿಮಾನಿಗಳು ಸಾಮಾಜಿಕ ಜಾಲತಾಣಗಳಲ್ಲಿ "ಥಲಾ ಡೇ (Thala Day)" ಎಂದು ಸಂಭ್ರಮದಿಂದ ಆಚ-ರಿಸುತ್ತಾರೆ. ಭಾರತದ ಮಾಜಿ ನಾಯಕ ಹಾಗೂ ಅತ್ಯಂತ ಯಶಸ್ವಿ ವಿಕೆಟ್‌ಕೀಪರ್-ಬ್ಯಾಟರ್ ಆಗಿರುವ ಧೋನಿ ಅವರ ನಾಯಕತ್ವ, ಶಾಂತ ಸ್ವಭಾವ ಮತ್ತು ಐತಿಹಾಸಿಕ ಸಾಧನೆಗಳನ್ನು ಈ ದಿನ ಅಭಿಮಾನಿಗಳು ವಿಶೇಷವಾಗಿ ಸ್ಮರಿಸುತ್ತಾರೆ.

## ಸುಭಾಷಿತ

ನೀವು ನಿದ್ದೆಯಲ್ಲಿ ಕಾಣುವುದು ಕನಸಲ್ಲ.
ನಿಮ್ಮನ್ನು ನಿದ್ದೆ ಮಾಡಲು ಬಿಡದಿರುವುದೇ
ನಿಜವಾದ ಕನಸು.
-ಎ.ಪಿ.ಜೆ. ಅಬ್ದುಲ್ ಕಲಾಂ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಹೆಚ್‌ಎಂಟಿ ಪುನಶ್ಚೇತನ ಪ್ಯಾಕೇಜ್ ತಡೆಯಲು

# ರಾಜ್ಯ ಕಾಂಗ್ರೆಸ್ ಸರಕಾರ ಸಂಚು : ಕುಮಾರಸ್ವಾಮಿ

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಷ್ಟ್ರದಲ್ಲಿಯೇ ಪ್ರತಿಷ್ಠಿತ ಕಾರ್ಖಾನೆಯಾಗಿದ್ದ ಹೆಚ್‌ಎಂಟಿ ಪುನಶ್ಚೇತನಕ್ಕೆ ಕೇಂದ್ರ ಸರ್ಕಾರ ಗಂಭೀರ ಪ್ರಯತ್ನ ನಡೆಸುತ್ತಿರುವ ಬೆನ್ನಲ್ಲಿಯೇ ರಾಜ್ಯ ಕಾಂಗ್ರೆಸ್ ಸರಕಾರವು ಅರಣ್ಯ ಇಲಾಖೆಯನ್ನು ಛೂ ಬಿಟ್ಟು ಅಡ್ಡಿಪಡಿಸಲು ಪ್ರಯತ್ನ ಮಾಡುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಅತ್ಯಂತ ಗಂಭೀರ ಆರೋಪ ಮಾಡಿದರು.**

ಕೆಲ ಮಾಧ್ಯಮಗಳಲ್ಲಿ ಹೆಚ್‌ಎಂಟಿಗೆ ರಾಜ್ಯ ಅರಣ್ಯ ಇಲಾಖೆ ನೋಟಿಸ್ ನೀಡಿ ಭೂಮಿ ತೆರವು ಮಾಡಲು ಗಡುವು ವಿಧಿಸಿದೆ ಎಂಬ ವರದಿಗಳು ಬಂದ ಹಿನ್ನೆಲೆಯಲ್ಲಿ ತುರ್ತು



ಮಾಧ್ಯಮಗೋಷ್ಠಿ ನಡೆಸಿದ ಕೇಂದ್ರ ಸಚಿವರು; ಈಗಾಗಲೇ ಇದಕ್ಕೆ ಸಂಬಂಧಿಸಿದ ವ್ಯಾಜ್ಯ ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿದೆ. ಇಂತಹ ಸೂಕ್ಷ್ಮ ಸಂದರ್ಭದಲ್ಲಿ ರಾಜ್ಯ ಸರಕಾರವು ಅರಣ್ಯ ಇಲಾಖೆಯ ಮೂಲಕ ಗಡುವು ವಿಧಿಸಿ ನೋಟಿಸ್ ನೀಡಿರುವುದು ನ್ಯಾಯಾಂಗ ನಿಂದನೆ ಹಾಗೂ ಕಾನೂನುಬಾಹಿರ ಕೂಡ ಆಗುತ್ತದೆ ಎಂದು ಸ್ಪಷ್ಟಪಡಿಸಿದರು.

ಹೆಚ್‌ಎಂಟಿ ವಶದಲ್ಲಿರುವ 430 ಎಕರೆ ಜಮೀನು ಅರಣ್ಯ ಪ್ರದೇಶ ಆಗಿರುವುದ-ರಿಂದ ಕೂಡಲೇ ಅಷ್ಟು ಜಾಗವನ್ನು ಅರಣ್ಯ ಇಲಾಖೆಗೆ ಬಿಟ್ಟುಕೊಡಬೇಕು ಎಂದು ಬೆಂಗಳೂರು ನಗರ ಉಪ ಅರಣ್ಯ ಸಂರಕ್ಷಣಾಧಿಕಾರಿ (ಡಿಸಿಎಫ್) ಎನ್.ರವೀಂದ್ರ ಕುಮಾರ್ ಆದೇಶ ನೀಡಿರುವುದು ನ್ಯಾಯಾಂಗ ಕಲಾಪಗಳಿಗೆ ಅಡ್ಡಿಪಡಿಸಿದಂತೆ ಆಗುತ್ತದೆ. ಅಲ್ಲದೆ ಈ ಅಧಿಕಾರಿಗೆ ಅಂತಹ ಆದೇಶ ನೀಡುವ ಅಧಿಕಾರ ವ್ಯಾಪ್ತಿಯು ಇರುವುದಿಲ್ಲ. ಈ ಬಗ್ಗೆ ಹೆಚ್‌ಎಂಟಿ ನ್ಯಾಯಾಲಯದಲ್ಲಿಯೇ ಪ್ರಶ್ನೆ ಮಾಡುತ್ತದೆ ಎಂದು ಸಚಿವರು ಹೇಳಿದರು.

ಅನೇಕ ವರ್ಷಗಳಿಂದ ನಷ್ಟದ ಸುಳಿಗೆ ಸಿಲುಕಿ ನೆನೆಗುದಿಗೆ ಬಿದ್ದಿದ್ದ ಹೆಚ್-ಎಂಟಿ ಕಾರ್ಖಾನೆಗೆ ಮರುಜೀವ ನೀಡುವ ಉದ್ದೇಶದಿಂದ ನಾನು ಪ್ರಧಾನ ಮಂತ್ರಿಗಳು ಮತ್ತು ಕೇಂದ್ರದ ಹಣಕಾಸು ಸಚಿವರನ್ನು ಒಪ್ಪಿಸಿ ವಿಶೇಷ ಪ್ಯಾಕೇಜ್ ತರುವ ಬಗ್ಗೆ ಪ್ರಯತ್ನ ಮಾಡುತ್ತಿದ್ದೆ. ಈ ಕಾರ್ಖಾನೆಯು ನಾನು ಸಚಿವನಾಗಿರುವ ಬೃಹತ್ ಕೈಗಾರಿಕೆ ಇಲಾಖೆಯ ವ್ಯಾಪ್ತಿಗೆ ಬರುತ್ತದೆ. ಪ್ಯಾಕೇಜ್ ಘೋಷಣೆ ಹತ್ತಿರದಲ್ಲಿ ಇರುವಾಗಲೇ ರಾಜ್ಯ ಸರಕಾರ ದುರುದ್ದೇಶದಿಂದ ಇಂತಹ ನೋಟಿಸ್ ಕೊಡಿಸಿದೆ ಎಂದು ಸಚಿವ ಕುಮಾರಸ್ವಾಮಿ ಆರೋಪ ಮಾಡಿದರು.

ಈ ಭೂಮಿಯು ಸುಮಾರು 15,000 ಕೋಟಿ ಬೆಲೆ ಬಾಳುತ್ತದೆ ಎಂದು ಈ ಅಧಿಕಾರಿ ಮಹಾಶಯ ಆ ಭೂಮಿಗೆ ಬೆಲೆ ಕಟ್ಟಿದ್ದಾರೆ. ಅಂದ ಮೇಲೆ ಈ ಭೂಮಿಯ ಮೇಲೆ ಯಾರದೋ ಕಾಕದೃಷ್ಟಿ ಬಿದ್ದಿರಬೇಕು ಎಂಬುದು ನನ್ನ ಅನುಮಾನ.

# ಸನ್ ರೈಸ್ ಕಾಲೇಜಿನಲ್ಲಿ ಡಾ. ಬಾಬು ಜಗಜೀವನ ರಾಮ್ ಅವರ 40ನೇ ಪುಣ್ಯತಿಥಿ ಆಚರಣೆ

❏ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸ್ಥಳೀಯ ಸನ್ ರೈಸ್ ಡಿ-ಫಾರ್ಮಸಿ, ನರ್ಸಿಂಗ್, ಪಾರಾ ಮೆಡಿಕಲ್ ಕಾಲೇಜಿನಲ್ಲಿ ಭಾರತದ ಮಾಜಿ ಉಪ ಪ್ರಧಾನಿ, ಸಾಮಾಜಿಕ ನ್ಯಾಯದ ಹರಿಕಾರ ಡಾ. ಬಾಬು ಜಗಜೀವನ ರಾಮ್ ಅವರ 40ನೇ ಪುಣ್ಯತಿಥಿಯನ್ನು ಸೋಮವಾರ ಅತ್ಯಂತ ಗೌರವಪೂರ್ವಕವಾಗಿ ಆಚರಿಸಲಾಯಿತು.**

ಕಾರ್ಯಕ್ರಮದ ಅಂಗವಾಗಿ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ವೇದಿಕೆಯಲ್ಲಿ ಡಾ. ಬಾಬು ಜಗಜೀವನ ರಾಮ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಲಾಯಿತು. ನಂತರ ದೇಶದ ಅಪ್ರತಿಮ ನಾಯಕನಿಗೆ ಗೌರವ ಸೂಚಕವಾಗಿ ಒಂದು ನಿಮಿಷದ ಮೌನಾಚರಣೆ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಂಸ್ಥೆಯ



ಅಧ್ಯಕ್ಷರಾದ ಇರ್ಫಾನ್ ಕೆ ಅವರು ಮಾತನಾಡಿ, "ಡಾ. ಬಾಬು ಜಗಜೀವನ ರಾಮ್ ಅವರು ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಮತ್ತು ಸ್ವತಂತ್ರ ಭಾರತದ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ದೀನದಲಿತರು ಹಾಗೂ ಶೋಷಿತ ಸಮುದಾಯದ ಏಳಿಗೆಗಾಗಿ ಅವರು ಜೀವನದುದ್ದಕ್ಕೂ ಹೋರಾಡಿದರು. ಅಂತಹ ಮಹಾನ್ ಚೇತನದ ಆದರ್ಶಗಳನ್ನು ಇಂದಿನ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು" ಎಂದು ಕರೆ ನೀಡಿದರು.

ನರ್ಸಿಂಗ್ ವಿಭಾಗದ ಪ್ರಾಂಶುಪಾಲರಾದ ಲಾಜರ್ ಸಿರಿಲ್ ಅವರು ಮಾತನಾಡಿ, "ಬಾಬು ಜಗಜೀವನ ರಾಮ್ ಅವರು ಕೇವಲ ರಾಜ-ಕಾರಣಿಯಾಗಿರಲಿಲ್ಲ, ಅವರು ಸಾಮಾಜಿ-ಕ ಸಮಾನತೆಯ ಪ್ರತಿಪಾದಕರಾಗಿದ್ದರು.

ಅವರ ಸರಳತೆ, ದಿಟ್ಟತನ ಮತ್ತು ಬದ್ಧತೆ ಇಂದಿನ ಪೀಳಿಗೆಗೆ ಸದಾ ಸ್ಫೂರ್ತಿಯಾಗಿದೆ" ಎಂದು ಸ್ಮರಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿಗಳಾದ ಇರ್ಷಾದ್ ಕೆ, ಪಾರಾ ಮೆಡಿಕಲ್ ವಿಭಾಗದ ಪ್ರಾಂಶುಪಾಲರಾದ ಚಕ್ರವರ್ತಿ ಹಾಗೂ ಉಪನ್ಯಾಸಕ ವೃಂದದವರಾದ ಆಶುಪಾಶ, ರಾಜೇಶ, ವೀರೇಶ್, ಶೋಭಾ, ಸುಧಾ, ಚೈತ್ರ, ಸನಾ, ವೀರಭದ್ರಯ್ಯ ಸೇ-ರಿದಂತೆ ಕಾಲೇಜಿನ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ರಾಜ್ಯದ ರೈತರಿಂದ ಖರೀದಿಸಿದ ಮುಂಗಾರು-ಹಿಂಗಾರು ಜೋಳದ ಬಾಕಿ ಹಣ ತಕ್ಷಣ ಪಾವತಿಸಲು ಆಗ್ರಹ

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜ್ಯದ ರೈತರಿಂದ ಸರ್ಕಾರದ ಖರೀದಿ ಕೇಂದ್ರಗಳ ಮೂಲಕ ಖರೀದಿಸಲಾದ ಮುಂಗಾರು ಹಾಗೂ ಹಿಂಗಾರು ಜೋಳದ ಖರೀದಿ ಹಣವನ್ನು ತಕ್ಷಣವೇ ರೈತರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು ಎಂದು ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರಿಗೆ ಮನವಿ ಸಲ್ಲಿಸಲಾಗಿದೆ.**

ರಾಜ್ಯದ ರೈತರು ಬೆಳೆದ ಜೋಳವನ್ನು ಸರ್ಕಾರ ಖರೀದಿಸಿ ಸುಮಾರು ನಾಲ್ಕು ತಿಂಗಳುಗಳು ಕಳೆದಿದ್ದರೂ, ಬಹುತೇಕ ರೈತರಿಗೆ ಇನ್ನೂ ಖರೀದಿ ಹಣ ಪಾವತಿಯಾಗಿಲ್ಲ. ಕೆಲವೇ ರೈತರಿಗೆ ಹಣ ಜಮೆಯಾಗಿದ್ದು, ಸುಮಾರು 75 ಶೇಕಡಾ ರೈತರು ತಮ್ಮ ಬಾಕಿ ಹಣ-ಕ್ಕಾಗಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ರೈತರು ಸಾಲ ಮಾಡಿ, ಅಪಾರ ಶ್ರಮವಹಿಸಿ ಬೆಳೆದ ಜೋಳವನ್ನು ಜನವರಿ ತಿಂಗಳಲ್ಲಿ ಖರೀದಿ ಕೇಂದ್ರಗಳಿಗೆ ಒಪ್ಪಿಸಿದ್ದರೂ, ಹಣ



ಸಕಾಲಕ್ಕೆ ದೊರೆಯದ ಕಾರಣ ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬ್ಯಾಂಕ್ ಹಾಗೂ ಖಾಸಗಿ ಸಾಲಗಳ ಮೇಲಿನ ಬಡ್ಡಿಯ ಹೊರೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ರೈತರು ಸಾಲದ ಸುಳಿಯಲ್ಲಿ ಸಿಲುಕುವಂತಾಗಿದೆ ಎಂದು ಆತಂಕ ವ್ಯಕ್ತಪಡಿಸಲಾಗಿದೆ.

ಕಳೆದ ವರ್ಷ ಅತಿವೃಷ್ಟಿಯಿಂದ ರೈತರು ಅಪಾರ ನಷ್ಟ ಅನುಭವಿಸಿದ್ದು, ಈ ವರ್ಷವೂ ಮಳೆಯ ಕೊರತೆಯಿಂದ ಮುಂಗಾರು ಬೆಳೆ ಹಾನಿಗೊಳಗಾಗಿದೆ. ಇಂತಹ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರವೇ ಖರೀದಿಸಿದ ಬೆಳೆಯ ಹಣವನ್ನು ವಿಳಂಬವಾಗಿ ಪಾವತಿಸುವುದು ರೈತರ ಮೇಲೆ ಮತ್ತಷ್ಟು ಆರ್ಥಿಕ ಹೊರೆ ಉಂಟುಮಾಡುತ್ತಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಆದ್ದರಿಂದ, ರಾಜ್ಯದ ಎಲ್ಲಾ ರೈತರಿಗೆ ಬಾಕಿ ಇರುವ ಮುಂಗಾರು ಹಾಗೂ ಹಿಂಗಾರು ಜೋಳದ ಖರೀದಿ ಹಣವನ್ನು ಯಾವುದೇ ವಿಳಂಬವಿಲ್ಲದೆ ತಕ್ಷಣವೇ ಅವರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು. ಜೊತೆಗೆ ಮುಂದಿನ ದಿನಗಳಲ್ಲಿ ರೈತ-ರಿಗೆ ನಿಗದಿತ ಅವಧಿಯೊಳಗೆ ಖರೀದಿ ಹಣ ಪಾವತಿಸುವ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಮನವಿ ಮೂಲಕ ಆಗ್ರಹಿಸಲಾಗಿದೆ.

## ಮಸ್ಕಿ ಬಿಜೆಪಿ ಮಂಡಲವತಿಯಿಂದ ಡಾ. ಶ್ಯಾಮ್ ಪ್ರಸಾದ್ ಮುಖರ್ಜಿ ಅವರ 125ನೇ ಜನ್ಮ ದಿನಾಚರಣೆ

❏ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನಸಂಘದ ಸಂಸ್ಥಾಪಕರು ಹಾಗೂ ಪ್ರಥ-'ಮ ರಾಷ್ಟ್ರೀಯ ಅಧ್ಯಕ್ಷರಾದ ಡಾ. ಶ್ಯಾಮ್ ಪ್ರಸಾದ್ ಮುಖರ್ಜಿ ಅವರ 125ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು.**

ಈ ಸಂದರ್ಭದಲ್ಲಿ ಪ್ರಸನ್ನ ಪಾಟೀಲ್, ಮಾತನಾಡಿ ದೇಶದ ಏಕತೆ ಮತ್ತು ಸಮಗ್ರತೆಗಾಗಿ ಡಾ. ಮುಖರ್ಜಿ ಅವರು ನೀಡಿದ ಕೊಡುಗೆ ಅಪಾರ ವಾಗಿದೆ.ಜಮ್ಮು-ಕಾಶ್ಮೀರದ ಪೂರ್ಣ ವಿಲೀನಕ್ಕಾಗಿ ಹೋರಾಡಿದ ಧೀಮಂತ ನಾಯಕ ಅವರಾಗಿದ್ದಾರೆ. ಅವರ ರಾಷ್ಟ್ರೀಯತಾವಾದದ ಸಿದ್ಧಾಂತಗಳು ಹಾಗೂ ದೇಶಭಕ್ತಿ ಇಂದಿಗೂ ಪ್ರತಿಯೊಬ್ಬ ಕಾರ್ಯಕರ್ತನಿಗೂ ಪ್ರೇರಣೆಯಾಗಿದೆ," ಎಂದು ಸ್ಮರಿಸಿದರು.




ಇದಕ್ಕೂ ಮುನ್ನ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ನಾಯಕರು ಹಾಗೂ ಕಾರ್ಯಕರ್ತರು ಡಾ. ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಗೌರವ ನಮನಗಳನ್ನು ಅರ್ಪಿಸಿದರು.

ಈವೇಳೆ, ಮಸ್ಕಿ ಕ್ಷೇತ್ರದ ಪ್ರಮುಖ ಬಿಜೆಪಿ ನಾಯಕರು, ವಿವಿಧ ಮೋರ್ಚಾಗಳ ಪದಾಧಿಕಾ-ರಿಗಳು ಹಾಗೂ ನೂರಾರು ಸಂಖ್ಯೆಯ ಪಕ್ಷದ ಕಾರ್ಯಕರ್ತರು ಭಾಗವಹಿಸಿ ಡಾ. ಮುಖರ್ಜಿ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪ ಮಾಡಿದರು.

# 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತವಾಗಿ ಹೆಚ್‌ಪಿಇ ಲಸಿಕೆ

❏ ನೈಜ್ಯ ದೆಸೆ ನ್ಯೂಸ್

**ರಾಯಚೂರು; ಮನುಷ್ಯರಿಗೆ ಬರುವ ಖಾಯಿಲೆಗಳು ಯಾರಿಗಾದರೂ ಬರಬಹುದು, ಇಂತವರಿಗೆ ಅಂತಾ ಬರುವುದಿಲ್ಲ, ಅದರಲ್ಲೂ ಜೀವಕ್ಕೆ ಮಾರಕವಾಗುವ ಕಾನ್ಸ್‌ರ್‌ನಂತ ರೋಗಗಳನ್ನು ಎಲ್ಲರೂ ಸೇರಿ ತಡೆಗಟ್ಟಬೇಕಿದ್ದು, ಹೆಣ್ಣು ಮಕ್ಕಳಿಗೆ ಭವಿಷ್ಯದಲ್ಲಿ ಗರ್ಭಕಂಠದ ಕ್ಯಾನ್ಸರ್ ಬರದಂತೆ ತಡೆಯಲು ಸರಕಾರವು ಉಚಿತವಾಗಿ ಹಾಕುತ್ತಿರುವ ಹೆಚ್‌ಪಿವಿ ಲಸಿಕೆಯನ್ನು ತಪ್ಪದೆ 14 ವರ್ಷದ ಹೆಣ್ಣು ಮಕ್ಕಳಿಗೆ ಹಾಕಿಸಲು ಡಾ ಶ್ವೇತಾಂಬರಿ ಮನವಿ ಮಾಡಿದರು.**

ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಾರ್ಗದರ್ಶನದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಜಹೀರಾಬಾದ್ ಸಂಯೋಗದಲ್ಲಿ ಪ್ರೌಢಶಾಲಾ ಮಕ್ಕಳಿಗೆ ಹೆಚ್‌ಪಿವಿ ಲಸಿಕೆ ಹಾಕಿದ ನಂತರ



ಮಾತನಾಡುತ್ತಾ, ವಿಶೇಷವಾಗಿ ತಂದೆ-ತಾಯಿ ತಮ್ಮ ಮಗಳ ಭವಿಷ್ಯದ ದೃಷ್ಟಿಯಿಂದ ಹಾಗೂ ಗಂಭೀರ ಆರೋಗ್ಯ ಸಮಸ್ಯೆಯನ್ನುಂಟು ಮಾಡುವ ಗರ್ಭಕಂಠದ ಕ್ಯಾನ್ಸರ್ ತಡೆಗೆ ಈ ಲಸಿಕೆ ಅತ್ಯಂತ ಉಪಯುಕ್ತವಾಗಿದ್ದು ತಪ್ಪದೆ ಹಾಕಿಸಲು ಕೋರಿದರು.

ಗರ್ಭಕಂಠದ ಕ್ಯಾನ್ಸರ್ ಉಂಟಾಗುವ ಕಾರಣಗಳು: ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು, ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ಸೋಂಕು



ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್ ಆಗಿ ಬದಲಾಗುತ್ತದೆ. ಈ ಹಿನ್ನಲೆಯಲ್ಲಿ ಮಾರಕವಾಗುವುದನ್ನು ತಡೆಯಲು ಹೆಚ್.ಪಿ.ವಿ ಲಸಿಕೆಯು ಸೂಕ್ತವಾಗಿದೆ.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಮಾತನಾಡಿ, ಕೆಲವು ವ್ಯಕ್ತಿಗಳು ಅದರಲ್ಲೂ ಯಾವುದೇ ವೈದ್ಯ ಪದವಿ ಪಡೆಯದವರು ತಾವೇ ವೈದ್ಯರೆಂಬಂತೆ ಬಿಂಬಿಸಿಕೊಂಡು ಸಾಮಾಜಿಕ ಜಾಲತಾಣಗಳಲ್ಲಿ ತಪ್ಪು ಮಾಹಿತಿ ನೀಡುವುದನ್ನು ನಂಬದೆ ಹಾಗೂ ಅನಗತ್ಯ ತಪ್ಪು ಮಾಹಿತಿಗಳಿಗೆ ಕಿವಿಗೊಡದೆ, ತಮ್ಮ ಮನೆಯ 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಹೆಚ್.ಪಿ.ವಿ (ಹೂಮನ್ ಪ್ಯಾಪಿಲೋಮ ವೈರಸ್) ವಿರುದ್ಧದ ಲಸಿಕೆಯನ್ನು ತಪ್ಪದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಹಾಕಿಸಿ ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ, ಶುಶ್ರೂಷಣಾಧಿಕಾರಿ ಸುವರ್ಣಾ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾ-ರಿಗಳಾದ ಮಲ್ಲೇಶ್ವರಿ, ಶಾರದಾ, ಶಶಿಕಲಾ, ಆರೋಗ್ಯ ನಿರೀಕ್ಷಣಾಧಿಕಾರಿ ಶೃತಿ ಸೇರಿದಂತೆ ಶಾಲಾ ವಿದ್ಯಾರ್ಥಿನಿಯರು, ಪಾಲಕರು ಉಪಸ್ಥಿತರಿದ್ದರು. ಆರ್‌ಕೆಎಸ್‌ಕೆ ಕೌನ್ಸಲರ್ ಗೌರಮ್ಮ, ಆಶಾ ಕಾರ್ಯಕರ್ತೆ ಸೇರಿದಂತೆ ತಾಯಂದಿರು ಸಾರ್ವಜನಿಕರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

### ತಂದೆ ತ್ಯಾಗ

ಅವನ ಹೆಸರು ತಂದೆ
ಆದ್ರೆ ಅವನಿಗೆ ಹೆಸರಿಗಿಂತ ಜವಾಬ್ದಾರಿ ದೊಡ್ಡದು

ಬಿಸಿಲಲ್ಲಿ ಬೆಂದರೂ ದೂರುವುದಿಲ್ಲ
ಮಳೆಗಾಗಿ ನೆನೆದರೂ ನೋವು ಹೇಳುವುದಿಲ್ಲ
ನಮಗಾಗಿ ರಾತ್ರಿ ಕೆಲಸ, ಹಗಲು ಕೆಲಸ
ತನ್ನ ದಣಿವನ್ನು ನಗುವಿನಲ್ಲಿ ಮುಚ್ಚಿಡುತ್ತಾನೆ

ನಮಗೆ ಹೊಸ ಬಟ್ಟೆ ತರುವಾಗ
ತಾನು ಹಳೆಯ ಚಪ್ಪಲಿ ಹೊಲಿಸಿಕೊಳ್ತಾನೆ
ನಮ್ಮ ಶಾಲೆ ಶುಲ್ಕ ಕಟ್ಟಲು ಸಾಲ ಮಾಡ್ತಾನೆ
ಆದ್ರೆ "ಏನೂ ಆಗಿಲ್ಲ ಮಗು" ಅಂತಾನೆ

ಹೊಟ್ಟೆಗೆ ಅರ್ಧ ಊಟ ಮಾಡಿ
ನಮ್ಮ ತಟ್ಟೆಯಲ್ಲಿ ಇಡೀ ಕೋಳಿ ಸಾರು ಹಾಕ್ತಾನೆ
"ನನಗೆ ಹಸಿವಿಲ್ಲ" ಅಂತ ಸುಳ್ಳು ಹೇಳ್ತಾನೆ
ಆ ಸುಳ್ಳೇ ಅವನ ದೊಡ್ಡ ಪ್ರೀತಿ

ನಾವು ಅಳಿದರೆ ಕಲ್ಲಾಗ್ತಾನೆ
ನಾವು ನಕ್ಕರೆ ದೇವರಾಗ್ತಾನೆ
ನಾವು ಬಿದ್ದರೆ ಕೈ ಕೊಡ್ತಾನೆ
ನಾವು ಎದ್ದು ನಿಂತಾಗ ಹೆಮ್ಮೆಯಿಂದ ನೋಡ್ತಾನೆ

ಅವನ ಕನಸು ಏನು ಗೊತ್ತಾ?
ನಮ್ಮ ಹೆಸರು ಎಲ್ಲರೂ ಹೇಳಬೇಕು ಅಂತ
ನಮ್ಮ ಗೆಲುವಲ್ಲಿ ಅವನ ಜೀವನ ನೋಡ್ತಾನೆ
ನಮ್ಮ ಸಾಧನೆಯೇ ಅವನ ಪಿಂಚಣಿ

"ತಂದೆ ಕಠಿಣ" ಅಂತ ಬೈತೀವಿ
ಆದ್ರೆ ಆ ಕಠಿಣದ ಹಿಂದೆ
ಸಾವಿರ ಪ್ರಾರ್ಥನೆ ಇರುತ್ತೆ
"ನನ್ನ ಮಗ ಚೆನ್ನಾಗಿರಬೇಕು" ಅಂತ

ತಂದೆ ಅಂದ್ರೆ ಮನೆಗೆ ಆಧಾರ
ಬಿರುಗಾಳಿಗೆ ಮುರಿಯದ ಮರ
ನೋವು ಹೇಳದ ನದಿ
ಪ್ರೀತಿ ತೋರಿಸದ ದೇವರು

ಒಂದು ದಿನ ಅವನ ಕೈ ಹಿಡಿದು ಹೇಳೋಣ
"ಅಪ್ಪ, ನಿನ್ನ ತ್ಯಾಗಕ್ಕೆ ಸಾಲ ತೀರಿಸೋಕೆ ಆಗಲ್ಲ
ಆದ್ರೆ ನಿನ್ನ ಹಾಗೆ ಮಗನಾಗೋಕೆ ಪ್ರಯತ್ನ ಮಾಡ್ತೀನಿ"

:–ಎಸ್. ದುರಗಪ್ಪ.ಕುಷ್ಟಗಿ.ಕವಿತಾಳ

## ಮುಖ್ಯಗುರು ಎಂ.ಎ.ಶರಣಬಸವರಾಜ, ದೈಹಿಕ ಶಿಕ್ಷಕ ಕೆ.ಸಂತೋಷಕುಮಾರ್‌ಗೆ ಜಿಲ್ಲಾ ಮಟ್ಟದ ಉತ್ತಮ ದೈಹಿಕ ಶಿಕ್ಷಕ ಪ್ರಶಸ್ತಿ ಪುರಸ್ಕಾರ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಜಿಲ್ಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಮತ್ತು ಶಿಕ್ಷಣ ಇಲಾಖೆಯ ಸಂಯೋಗದಲ್ಲಿ ಬಳ್ಳಾರಿ ನಗರದಲ್ಲಿ ಸೋಮವಾರ ನಡೆದ ಜಿಲ್ಲಾ ಮಟ್ಟದ ದೈಹಿಕ ಶಿಕ್ಷಣ ಶಿಕ್ಷಕರ ಕಾರ್ಯಾಗಾರದಲ್ಲಿ ಅನುದಾನರಹಿತ ಶಾಲೆಗಳ ಪ್ರಾಥಮಿಕ ವಿಭಾಗದಲ್ಲಿ ಕಂಪ್ಲಿಯ ಪ್ರತಿಷ್ಠಿತ ವಿದ್ಯಾಸಾಗರ ಇಂಟರ್‌ನ್ಯಾಷನಲ್ ಶಾಲೆಯ ಮುಖ್ಯಗುರು ಎಂ.ಎ.ಶರಣಬಸವರಾಜ ಮತ್ತು ಪ್ರೌಢಶಾಲಾ ವಿಭಾಗದಲ್ಲಿ ಕಂಪ್ಲಿ ಕ್ವೀನ್ ಮೇರಿ ಶಾಲೆಯ ದೈಹಿಕ ಶಿಕ್ಷಕ ಕೆ.ಸಂತೋಷಕುಮಾರ್ ಇವರಿಗೆ 2025–26ನೇ ಸಾಲಿನ ಬಳ್ಳಾರಿ ಜಿಲ್ಲಾ ಮಟ್ಟದ ಉತ್ತಮ ದೈಹಿಕ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.**



ನಂತರ ಪ್ರಶಸ್ತಿ ಪುರಸ್ಕೃತ ಎಂ.ಎ.ಬಸವರಾಜ, ಕೆ.ಸಂತೋಷ್ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವುದನ್ನು ಪರಿಗಣಿಸಿ, ಈ ಪ್ರಶಸ್ತಿ ನೀಡಿದ್ದು, ಇನ್ನಷ್ಟು ಸೇವೆಗೆ ಉತ್ಸಾಹ ಹೆಚ್ಚಿಸಿದೆ. ಶಿಕ್ಷಣ ಎಂಬುವುದು ಹುಲಿಯ ಹಾಲಿದ್ದಂತೆ, ಅದನ್ನು ಕುಡಿದವರು ಘರ್ಜಿಸಲೇಬೇಕು ಎನ್ನುವ ಹಾಗೇ ಶಿಕ್ಷಣ ಪಡೆದ ಪ್ರತಿಯೊಂದು ಘರ್ಜಿಸುವ ಜೊತೆಗೆ ಜೀವನ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ. ಈ ನಿಟ್ಟಿನಲ್ಲಿ ಪೋಷಕರು ಮಕ್ಕಳಿಗೆ ಶಿಕ್ಷಣ ಕೊಡಿಸಲು ಮುಂದಾಗಬೇಕು ಎಂದರು. ಈ ಸಂದರ್ಭದಲ್ಲಿ ಕುರುಗೋಡು ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕಿ ಪದ್ಮ ರೆಡ್ಡಿ ಮತ್ತು ಜಿಲ್ಲಾ, ತಾಲೂಕು ಅಧ್ಯಕ್ಷರು ಹಾಗೂ ವಿವಿಧ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

## ಇತ್ತೀಚಿಗೆ ಪಟ್ಟಣದಲ್ಲಿ ಹೆಚ್ಚುತ್ತಿರುವ ಕಳ್ಳತನ ಪ್ರಕರಣಗಳು ಎಚ್ಚರಿಕೆ ವಹಿಸದ ಪೊಲೀಸ್ ಇಲಾಖೆ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ದೇವಣ್ಣ ತೋಟ ಏರಿಯಾದಲ್ಲಿ ರಾತ್ರಿ ವೇಳೆ ಮನೆ ಮುಂದಿನ ಗಂಧದ ಮರವನ್ನು ಕಳ್ಳರು ಕತ್ತರಿಸಿ ಕದ್ದೊಯ್ದ ಘಟನೆ ರವಿವಾರ ಬೆಳಗಿನ ಜಾವದಲ್ಲಿ ನಡೆದಿದೆ.**

ಪಟ್ಟಣದ ದೇವಣ್ಣ ತೋಟದ ಕಾಲೋನಿಯಲ್ಲಿರುವ ನಿವೃತ್ತ ಶಿಕ್ಷಕ ಅಜ್ಜನಗೌಡ ಇವರ ಮನೆಯ ಆವರಣದಲ್ಲಿ ಬೆಳೆದು ನಿಂತಿ–



ದ್ದ ಅಂದಾಜು 15 ವರ್ಷಗಳ ಗಂಧದ ಮರದ ಮೇಲೆ ಕಣ್ಣು ಹಾಕಿದ ಕಳ್ಳರು ಶಿಕ್ಷಕ ಅಜ್ಜನಗೌಡ ಅವರು ಮನೆಯಲ್ಲಿ ಇಲ್ಲದನ್ನು ಗಮನಿಸಿ ರಾತ್ರಿ ಮನೆಯ ಕಂಪೌಂಡ್ ಹಾರಿ ಅಜ್ಜನಗೌಡ ಅವರ ಮಗ ಮಲಗಿದ್ದ ಕೋಣೆಯ ಹೊರಗಡೆ ಚಿಲಕ ಹಾಕಿ ಶಬ್ದ ರಹಿತ ಯಂತ್ರದಿಂದ ಬೆಲೆ ಬಾಳುವ ಗಂಧದ ಮರವನ್ನು ಕತ್ತರಿಸಿ ಪರಾರಿಯಾಗಿದ್ದಾರೆ.

ರವಿವಾರ ಬೆಳಿಗ್ಗೆ ಎದ್ದು ಕದ ತೆರೆಯಲು ಹೋದ ಮಗ ಹೊರಗಡೆಯಿಂದ ಚಿಲಕ ಹಾಕಿರುವುದನ್ನು ಕಂಡು ಪಕ್ಕದ ಮನೆಯವ–ರಿಗೆ ಫೋನ್ ಮಾಡಿ ಕದ ತೆರೆಸಿದಾಗ ಮನೆಯ ಆವರಣದಲ್ಲಿದ್ದ ಗಂಧದ ಮರವನ್ನು ಕಳ್ಳರು ಕತ್ತರಿಸಿ ಕೊಂಡೊಯ್ದಿರುವುದನ್ನು ಕಂಡು ಹೌಹಾರಿದ್ದಾರೆ.

ನಂತರ ಪೋಲಿಸರಿಗೆ ಮಾಹಿತಿ ನೀಡಿದ ಅಜ್ಜನಗೌಡ ಅವರ ಪುತ್ರ ಪೊಲೀಸರ ಸಲಹೆ ಮೇರೆಗೆ ಅರಣ್ಯಾಧಿಕಾರಿಗೆ ದೂರು ಸಲ್ಲಿಸಿದ್ದಾರೆ. ದೂರು ಪಡೆದ ಅರಣ್ಯ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಮಹಜರು ಮಾಡಿದ್ದಾರೆ. ನಾಳೆ ಈ ಕುರಿತು ಪ್ರಕರಣ ದಾಖಲು ಮಾಡಿ ತನಿಖೆ ಮಾಡಲಾಗುವುದು ಎಂದು ಅರಣ್ಯಾಧಿಕಾರಿ ಪುರುಷೋತ್ತಮ ತಿಳಿಸಿದ್ದಾರೆ.

## ಶೋಷಿತರ ಧ್ವನಿಯಾಗಿ ಪರ್ಯಾಯ ರಾಜಕೀಯ ಶಕ್ತಿ ನಿರ್ಮಾಣ: ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ; ಸಂವಿಧಾನದ ಆಶಯಗಳನ್ನು ಸಾಕಾರಗೊಳಿಸುವ ಉದ್ದೇಶದಿಂದ ದಲಿತರು, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಹಾಗೂ ಶೋಷಿತ ಸಮುದಾಯಗಳನ್ನು ಒಗ್ಗೂಡಿಸಿ ಹೊಸ ರಾಜಕೀಯ ಪಕ್ಷವನ್ನು ಸ್ಥಾಪಿಸಲಾಗುವುದು ಎಂದು ಚಿತ್ರ ನಟ ಹಾಗೂ ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ಹೇಳಿದರು.**

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾಜದಲ್ಲಿ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಸಂವಿಧಾನಾತ್ಮಕ ಮೌಲ್ಯಗಳನ್ನು ಬಲಪಡಿಸುವ ಉದ್ದೇಶದಿಂದ ಹೊಸ ರಾಜಕೀಯ ವೇದಿಕೆಯನ್ನು ರೂಪಿಸಲಾಗುತ್ತಿದೆ ಎಂದರು. ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಕಾರ್ಮಿಕರು, ರೈತರು, ಮಹಿಳೆಯರು ಹಾಗೂ ಯುವಜನರನ್ನು ಒಗ್ಗೂಡಿಸಿ ಪರ್ಯಾಯ



ರಾಜಕೀಯ ಶಕ್ತಿಯನ್ನು ನಿರ್ಮಿಸುವ ಗುರಿ ನಮ್ಮದಾಗಿದೆ ಎಂದು ಹೇಳಿದರು. ಪ್ರಸ್ತುತ ಪಕ್ಷದ ನೋಂದಣಿ ಪ್ರಕ್ರಿಯೆ ನಡೆಯುತ್ತಿದ್ದು, ರಾಜ್ಯಾದ್ಯಂತ ಪ್ರವಾಸ ಕೈಗೊಂಡು ವಿವಿಧ ಸಮಾಜಪರ ಸಂಘಟನೆಗಳು, ದಲಿತ–ಬಹುಜನ ಹೋರಾಟಗಾರರು ಹಾಗೂ ಪ್ರಗತಿಪರ ಚಿಂತಕರೊಂದಿಗೆ ಸಮಾಲೋಚನೆ ನಡೆಸಲಾಗುತ್ತಿದೆ. ಕರ್ನಾಟಕದ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಸಂಘಟನೆಯನ್ನು ಬಲಪಡಿಸಿ ಪಕ್ಷವನ್ನು ಜನರ ನಡುವೆ ಕೊಂಡೊಯ್ಯುವ ಗುರಿ ಹೊಂದಿದ್ದೇವೆ ಎಂದು ಅವರು ತಿಳಿಸಿದರು.

2027ರ ಜನವರಿಯಲ್ಲಿ ಹುಬ್ಬಳ್ಳಿ ನಗರದಲ್ಲಿ 25 ಸಾವಿರಕ್ಕೂ ಹೆಚ್ಚು ಜನರ ಭಾಗವಹಿಸುವಿಕೆಯಲ್ಲಿ ಬೃಹತ್ ಸಮಾವೇಶ ಆಯೋಜಿಸಲಾಗುವುದು. ಇದೇ ಸಮಾವೇಶದಲ್ಲಿ ಪಕ್ಷದ ಹೆಸರು, ಚುನಾವಣಾ ಚಿಹ್ನೆ, ಧ್ವಜ, ಪ್ರಣಾಳಿಕೆ ಹಾಗೂ ರಾಜ್ಯ ಸಮಿತಿಯನ್ನು ಅಧಿಕೃತವಾಗಿ ಅನಾವರಣಗೊಳಿಸಲಾಗುವುದು ಎಂದು ಚೇತನ್ ಘೋಷಿಸಿದರು. ಸಮ ಸಮಾಜ ನಿರ್ಮಾಣ, ಸಾಮಾಜಿ–ಕ ನ್ಯಾಯ, ಸಮಾನ ಅವಕಾಶ ಹಾಗೂ ಸಂವಿಧಾನದ ಮೌಲ್ಯಗಳ ಆಧಾರದ ಮೇಲೆ ಜನಪರ ಆಡಳಿತವನ್ನು ರೂಪಿಸುವುದು ಪಕ್ಷದ ಪ್ರಮುಖ ಧ್ಯೇಯವಾಗಿದೆ ಎಂದು ಚೇತನ್ ಅಹಿಂಸಾ ತಿಳಿಸಿದರು. ಈ ಸಂದರ್ಭದಲ್ಲಿ ಪ್ರಭುರಾಜ ಕೊಡ್ಲಿ, ಮಲ್ಲೇಶ್ ಮಾಚನೂರು, ಹನುಮಂತ ಬ್ಯಾಗವಾಟ್, ಸುರೇಶ್ ಬೈಲ್ ಮರ್ಚೆಡ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ SIR ಕುರಿತು ವಾರ್ ರೂಮ್ ಗೆ ಬಸವರಾಜ ಪಾಟೀಲ್ ಇಟಗಿ ಬೇಟಿ



❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಕೆಪಿಸಿಸಿ ರಾಜ್ಯ ಉಪಾಧ್ಯಕ್ಷರು ಹಾಗೂ ವಿಧಾನ ಸಭಾ ಕ್ಷೇತ್ರದ ಮಾಜಿ ಶಾಸಕರಾದ ಡಿ.ಎಸ್.ಹೂಲಗೇರಿ ರವರ ನೇತೃತ್ವದಲ್ಲಿ ಪಟ್ಟಣದ ಪುರಸಬೆ ವಾರ್ಡ ನಂಬರ್ 08 , 09 ಹಾಗೂ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ,**

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (Special Intensive Revision ? SIR) ಕಾರ್ಯದ ಪ್ರಗತಿಯನ್ನು ಸ್ಥಳದಲ್ಲೇ ಪರಿಶೀಲಿಸಿದರು. ಪ್ರತಿಯೊಂದು ಮನೆಗೂ ಕಡ್ಡಾಯವಾಗಿ ಭೇಟಿ ನೀಡಿ, ಅರ್ಹ ಮತದಾರರ ಮಾಹಿತಿಯನ್ನು ಸಮಗ್ರವಾಗಿ ಪರಿಶೀಲಿಸಬೇಕು. ಯಾವುದೇ ಅರ್ಹ ಮತದಾರರು ವಿಶೇಷ ಸಮಗ್ರ ಪರಿಷ್ಕರಣೆ (SIR) ಪ್ರಕ್ರಿಯೆಯಿಂದ ವಂಚಿತರಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಃಐಔ ಗಳಿಗೆ ತಿಳಿಸಿದರು

ಮತದಾರರ ವಿವರಗಳನ್ನು ಗುಣಮಟ್ಟದೊಂದಿಗೆ ದಾಖಲಿಸಿ,ನಿಗದಿತ ಅವಧಿಯೊಳಗೆ ಯಾವುದೇ ವಿಳಂಬಕ್ಕೆ ಅವಕಾಶ ನೀಡದೆ ಪರಿಷ್ಕರಣೆ ಕಾರ್ಯವನ್ನು ಪೂರ್ಣಗೊಳಿಸುವಂತೆ ಃಐಔ ಗಳಿಗೆ ತಿಳಿಸಿದರು ಈ ಸಂಧರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅದ್ಯಕ್ಷರಾದ ಗೋವಿಂದ ನಾಯಕ , ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಅಪ್ಪಯ್ಯ ನಾಯಕ, ಡಾ.ಶಿವಬಸಪ್ಪ ಹೆಸರೂರು, ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿಯಾದ ಬಸವರಾಜ ಜೆಲ್ಲಿ, ಬ್ಲಾಕ್ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಮಹ್ಮದ್ ರಫೀ,


ಜಿಲ್ಲಾ ಪದವೀಧರ ಕಾಂಗ್ರೆಸ್ ಸಮಿತಿ ಅದ್ಯಕ್ಷ ಸಂಜೀವಪ್ಪ ಚಲುವಾದಿ, ಮಹಿಳಾ ಕಾಂಗ್ರೆಸ್ ಸಮಿತಿ ಜಿಲ್ಲಾ ಉಪಾಧ್ಯಕ್ಷರಾದ ಶ್ರೀಮತಿ ಗಂಗಮ್ಮ ಕಟ್ಟಿಮನಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅದ್ಯಕ್ಷರಾದ ಅಮರೇಶ ಹಿರೇಹೆಸರೂರು, ತಾಲ್ಲೂಕ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅದ್ಯಕ್ಷರಾದ ವೆಂಕಟೇಶ ಗುತ್ತೆದಾರ, ಯುವ ಕಾಂಗ್ರೆಸ್ ಅದ್ಯಕ್ಷ ಸಂತೋಷ ಸೊಪ್ಪಿಮಠ, ಬ್ಲಾಕ್ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತ ವಿಭಾಗ ಅದ್ಯಕ್ಷ ಖಾಜಾಹುಸೇನ ಪೂಲವಾಲಾ, ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಅದ್ಯಕ್ಷ ಮೌನೇಶ, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು ಮಾಜಿ ಪುರಸಭಾ ಸದಸ್ಯರು ಕಾಂಗ್ರೆಸ್ ಪಕ್ಷದ ಃಐಂ2 ಗಳು ಉಪಸ್ಥಿತಿ ಇದ್ದರು

## ಬೀದಿ ನಾಯಿಗಳ ಹಾವಳಿ ನಿಯಂತ್ರಣ, ಹಾಗೂ ಸಮರ್ಪಕವಾಗಿ ಕಸ ವಿಲೇವಾರಿ ಮಾಡುವಂತೆ ಉಸ್ಮಾನ್ ಪಾಷಾ ಮನವಿ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು ನಗರ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗುತ್ತಿದ್ದು, ಇವುಗಳ ನಿಯಂತ್ರಣಕ್ಕೆ ಸರ್ಕಾರದ ಯೋಜನೆಯಾದ ಅನಿಮಲ್ ಬರ್ತ್ ಕಂಟ್ರೋಲ್ ನ್ನು ಜಾ–ರಿಗೆ ತರಲು ಲಸಿಕೆ ಅಭಿಯಾನ ಹಾಗೂ ವಿವಿಧ ವಾರ್ಡ್ ಗಳಲ್ಲಿ ಕಸದ ಸಮರ್ಪಕ ವಿಲೇವಾರಿ ಕು–ರಿತು ಸಾರ್ವಜನಿಕ ಜಾಗೃತಿಯನ್ನು ಕೈಗೊಳ್ಳಬೇಕು ಎಂದು ಶ್ರೀ ಷಾ ಮಕಂದರ್ ಜನಪರ ಸೇವಾ ಸಮಿತಿಯ ಅಧ್ಯಕ್ಷರಾದ ಉಸ್ಮಾನ್ ಪಾಷಾ ನಗರಸಭೆ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.**

ಬೀದಿ ನಾಯಿಗಳ ಹಾವಳಿಯಿಂದ ಸಾರ್ವಜನಿಕರಲ್ಲಿ ಆತಂಕ ಹೆಚ್ಚಾಗಿದ್ದು, ವಾಹನ ಸವಾರರು, ಶಾಲೆಯ ಮಕ್ಕಳು, ಮಹಿಳೆಯರು, ತಿರುಗಾಡುತ್ತಿದ್ದು, ಗುಂಪಾಗಿ ಬರುವ ನಾಯಿಗಳ ಹಿಂಡು ಕಂಡು ಭಯಗೊಂಡಿದ್ದಾರೆ. ಕೆಲವೊಮ್ಮೆ ವಾಹನಗಳನ್ನು ಬೆನ್ನಟ್ಟುತ್ತಿವೆಂದು



ವಾಹನ ಸವಾರರು ದೂರಿದ್ದಾರೆ. ಸರ್ಕಾರದ ಸೂಚನೆಯಂತೆ ನಗರ ಪ್ರದೇಶಗಳಲ್ಲಿ ಬೀದಿ ನಾಯಿಗಳ ನಿಯಂತ್ರಣಕ್ಕೆ ಅನಿಮಲ್ ಬರ್ತ್ ಕಂಟ್ರೋಲ್ ಕಾರ್ಯಕ್ರಮ ಎಲ್ಲಿ ಕೂಡ ಕಂಡು ಬಂದಿಲ್ಲ. ಕಾರಣ ಈ ಯೋಜನೆಯ ಅಡಿಯಲ್ಲಿ ಬೀದಿ ನಾಯಿಗಳನ್ನು ಹಿಡಿದು ಶಸ್ತ್ರ ಚಿಕಿತ್ಸೆ ಮೂಲಕ ಸಂತಾನೋತ್ಪತ್ತಿ ನಿಯಂತ್ರಿಸುವುದು ಹಾಗೂ ರೇಬಿಸ್ ಲಸಿಕೆಯನ್ನು ನೀಡುವುದು ಅನಿವಾರ್ಯ,

ಅನೇಕ ವಾರ್ಡ್ ಗಳಲ್ಲಿ ಹೆಣ್ಣು ನಾಯಿಗಳು ಮರಿಗಳಿಗೆ ಜನ್ಮ ನೀಡುತ್ತಿರುವ ದೃಶ್ಯ ಕಂಡು ಬರುತ್ತಿದೆ. ನಾಯಿಗಳ ಸಂಖ್ಯೆ ನಿಯಂತ್ರಣ ತಪ್ಪುತ್ತಿದೆ. ರಾತ್ರಿ ವೇಳೆ ಜೋರಾಗಿ ಕಿರುಚುವುದು, ವಾಹನ ಸವಾರರ ಬೆನ್ನಟ್ಟುವುದು, ಹೆಚ್ಚಾಗಿದೆ. ಮಕ್ಕಳು ಹಾಗೂ ಹಿರಿಯ ನಾಗ–ರಿಕರು ರಸ್ತೆಯಲ್ಲಿ ಸಂಚರಿಸಲು ಭಯ ಪಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಜೊತೆಗೆ ಪಟ್ಟಣದಲ್ಲಿ ಕಸದ ಸಮರ್ಪಕ ವಿಲೇವಾರಿ ಆಗದಿರುವುದು ಬೀದಿ ನಾಯಿಗಳ ಹೆಚ್ಚಳಕ್ಕೆ ಕಾರಣವಾಗಿದೆ. ಹೊಟೇಲ್ ಹಾಗೂ ಮಾರುಕಟ್ಟೆ ಪ್ರದೇಶಗಳ ಬಳಿ ಘನ ತ್ಯಾಜ್ಯ ಬೀಳುವುದರಿಂದ ನಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಗುಂಪುಗೂಡುತ್ತಿವೆ. ಕಾರಣ ಆದಷ್ಟು ಬೇಗ ಅನಿಮಲ್ ಬರ್ತ್ ಕಂಟ್ರೋಲ್ ಕಾರ್ಯಕ್ರಮವನ್ನು ನಗರದಲ್ಲಿ ಪರಿಣಾಮಕಾರಿಯಾಗಿ ಜಾ–ರಿಗೊಳಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ: ಸಮೀರ್ ಪಾಷಾ, ಹುಸೇನ್ ಭಾಷಾ, ಪಂಪಾಪತಿ, ಹನೀಫ್, ಇರ್ಫಾನ್, ಸೇರಿದಂತೆ ಅನೇಕರಿದ್ದರು.

## ಕಾರುಣ್ಯಾಶ್ರಮದ ಸೇವೆಯಲ್ಲಿ ಭಾಗಿಯಾದರೆ ಮಾನವ ಬದುಕು ಸಾರ್ಥಕವಾಗುತ್ತದೆ – ವಿಜಯಕುಮಾರ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಾಧನ ರಾಯಚೂರು (ರಿ)ಕರ್ನಾಟಕ ಫೆವಾರ್ಡ್ –ಕೆ ಹಾಗೂ ಡ್ರೀಮ್ ಇಂಡಿಯಾ ನೆಟ್ ವರ್ಕ್ ಬೆಂಗಳೂರು ವತಿಯಿಂದ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ " ಬೆಂಬಲ ಸೇವಾ ಕಾರ್ಯಗಾರ " ಜರುಗಿತು.**

ಈ ಕಾರ್ಯಗಾರದಲ್ಲಿ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ ಫೆವರ್ಡ್ –ಕೆ ಹಾಗೂ ಡ್ರಿಮ್ ಇಂಡಿಯಾ ನೆಟ್ ವರ್ಕ್ ನ ಚೀಫ್ ಡೈರೆಕ್ಟರ್ ಗಳಾದ ಕಲಬುರ್ಗಿಯ ಡಾ. ಶೋಭಾರಾಣಿ ಮಾತನಾಡಿ ನಾವು ಅದೆಷ್ಟೋ ಆಶ್ರಮಗಳನ್ನು ನೋಡಿದ್ದೇವೆ ಆದರೆ ಕಾರುಣ್ಯಾಶ್ರಮವು ಕರುಣೆಯ ಕಡಲಾಗಿದೆ. ಇಲ್ಲಿರುವ ಪ್ರತಿಯೊಬ್ಬ ಆಶ್ರಯದಾತರುಗಳನ್ನು ನಾವುಗಳು ವೈಯಕ್ತಿಕವಾಗಿ ಸಮಲೋಚನೆ ನಡೆಸಿದಾಗ ಈ ಸಂಸ್ಥೆಯ ಸಿಬ್ಬಂದಿಗಳು ಹಾಗೂ ಪದಾಧಿಕಾರಿಗಳು ಇವರ




ಜೊತೆ ಸ್ವಂತ ರಕ್ತ ಸಂಬಂಧಿಗಳ ಹಾಗೆ ಬಾಂಧವ್ಯ ಹೊಂದಿರುವುದು ಮತ್ತು ಆಶ್ರಯದಾತುರುಗಳ ಹಿಂದಿನ ನೋವನ್ನು ಮರೆಸಿ ಅವರ ಸುಂದರ ಬದುಕಿಗೆ ಕಾರಣವಾದ ಈ ಸಂಸ್ಥೆಗೆ ನಮ್ಮ ಸಂಸ್ಥೆ ಸದಾವಕಾಲ ಬೆಂಬಲವಾಗಿರುತ್ತದೆ.

ಮಾನವೀಯತೆಯ ಮಂದಿರವಾಗಿ ಅಂಧ–ಅನಾಥರ ಬೆಳಕಾಗಿರುವ ಕಾರುಣ್ಯ ಕುಟುಂಬ ಕಲ್ಯಾಣ ಕರ್ನಾಟಕದ ಕರುಣೆಯ ಕುಟುಂಬವಾಗಿರುವುದು ನಮ್ಮೆಲ್ಲರಿಗೆ ಹೆಮ್ಮೆ ಎಂದು ಮಾತನಾಡಿ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು. ನಂತರ ರಾಯಚೂರು ಜಿಲ್ಲಾಧ್ಯಕ್ಷರಾದ ವಿಜಯಕುಮಾರ ಮಾತನಾಡಿ ಕಾರುಣ್ಯಾಶ್ರಮದ ಸೇವೆಯಲ್ಲಿ ಭಾಗಿಯಾದರೆ ಮಾನವ ಬದುಕು ಸಾರ್ಥಕವಾಗುತ್ತದೆ. ಇಂತಹ ಪ್ರಾಮಾಣಿಕವಾದಂತಹ ಸೇವೆಗೆ ನಮ್ಮ ಸಂಸ್ಥೆಯಿಂದ ಹಾಗೂ ವೈಯಕ್ತಿಕವಾಗಿ ಸಹಾಯ ಸಹಕಾರ ನೀಡುತ್ತೇವೆ. ಎಂದು ಮಾತನಾಡಿದರು. ನಂತರ ಸಾಧನಾ ಸಂಸ್ಥೆಯ ಚೀಪ್ ಎಕ್ಸಿಕ್ಯೂಟಿವ್ ಅಧಿಕಾರಿಗಳಾದ ಶರಣಪ್ಪ ಬರ್ಸಿ ಮಾತನಾಡಿ ಹರೇಟನೂರಿನ ಶ್ರೀ ದ್ಯಾವಮ್ಮ ದೇವಿಯ ಸಾಮಾನ್ಯ ಅರ್ಚಕನಾಗಿ ಅಮರಯ್ಯ ಸ್ವಾಮಿ ಕಾರುಣ್ಯಾಶ್ರಮ ಹುಟ್ಟು ಹಾಕಿದ್ದು ದೊಡ್ಡ ಇತಿಹಾಸ. ಸುಮಾರು ವರ್ಷಗಳ ಹಿಂದೆ ಅನಾಥಾಶ್ರಮ ವೃದ್ಧಾಶ್ರಮಗಳು ಎಂದರೆ ಹೇಗಿರುತ್ತವೆ ಅಲ್ಲಿನ ಆಶ್ರಯದಾತರುಗಳ ಬದುಕು ಹೇಗಿರುತ್ತದೆ ಎನ್ನುವುದನ್ನು ತೋ–ರಿಸಿಕೊಟ್ಟ ಕೀರ್ತಿ ಕಾರುಣ್ಯಾಶ್ರಮಕ್ಕೆ ಸಲ್ಲುತ್ತದೆ.

ಮತ್ತು ವಿಶೇಷವಾಗಿ ಹರೇಟನೂರು ಹಿರೇಮಠದ ನಿರಂತರ ಸಮಾಜ ಸೇವೆ ಇತಿಹಾಸ ಪುಟದಲ್ಲಿ ಸೇರಿದೆ. ಮುಂದಿನ ದಿನಮಾನಗಳಲ್ಲಿ ಈ ಸಂಸ್ಥೆಗೆ ಫೆವರ್ಡ್ –ಕೆ ವತಿಯಿಂದ ಮತ್ತು ನಮ್ಮ ಸಂಸ್ಥೆಗಳ ವತಿಯಿಂದ ಸಹಾಯ ಸಹಕಾರ ದೊರೆಯುತ್ತದೆ ಎಂದು ಮಾತನಾಡಿದರು. ಈ ಸಂದರ್ಭದಲ್ಲಿ ಫೇವರ್ಡ್ –ಕೆ ಜಿಲ್ಲಾಧ್ಯಕ್ಷರಾದ ವಿಜಯಕುಮಾರ ಹಾಗೂ ಡೈರೆಕ್ಟರ್ ಡಾ. ಶೋಭಾ ರಾಣಿ ಮತ್ತು ಸಾಧನಾ ಸಂಸ್ಥೆಯ ಚೀಫ್ ಎಕ್ಸಿಕ್ಯೂಟಿವ್ ಅಧಿಕಾರಿಗಳಾದ ಶರಣಪ್ಪ ಬರ್ಸಿ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಮಾಬೂ ಸುಭಾನಿ ಕೋ ಆರ್ಡಿನೇಟರ್ ಸಾಧನಾ ಸಂಸ್ಥೆ ಸಿಂಧನೂರು. ಹಾಗೂ ಡಾ. ಚನ್ನಬಸವ ಸ್ವಾಮಿ ಹಿರೇಮಠ ಕಾರ್ಯಾಧ್ಯಕ್ಷರು ಕಾರುಣ್ಯ ಆಶ್ರಮ. ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ.ಜ್ಯೋತಿ. ಮತ್ತು ಆಶ್ರಯದಾತರುಗಳು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

### 3991 ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಜುಲೈ 5, 2026

KSP ನೇಮಕಾತಿ 2026: 3991 ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯು, ಜೂನ್ 2026ರ ಅಧಿಕೃತ ಅಧಿಸೂಚನೆಯ ಮೂಲಕ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಹೊಸ ನಿಯಮದ ಪ್ರಕಾರ, ಸಾಮಾನ್ಯ (General), 2A, 2B ಹಾಗೂ SC/ST ಅಭ್ಯರ್ಥಿಗಳಿಗೆ ವಯೋಮಿತಿ ಅನ್ವಯಿಸುತ್ತದೆ. ಅಧಿಕೃತ ವೆಬ್‌ಸೈಟ್: ksp-recruitment.in

## ಗುರುಬಸವ ಮಹಾಸ್ವಾಮಿಗಳು

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಹೂವಿನಬಾವಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಧೀರ್ಘವಾಗಿ ಶಿಕ್ಷಕರಾಗಿ,ಮುಖ್ಯಗುರುಗಳಾಗಿ ಸೇವೆ ಸಲ್ಲಿಸಿ ವಯೊನಿವೃತ್ತಿಯಾದ ಅಮರೇಗೌಡ ಮಾ ಪಾ ಅವರ ವಯೊನಿವೃತ್ತಿ ಸಮಾರಂಭವು ಶ್ರೀ ಗವಿಸಿದ್ದೇಶ್ವರ ದೇವಸ್ಥಾನದಲ್ಲಿ ನಡೆಯಿತು.**





ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀ ಗುರುಬಸವ ಮಹಾಸ್ವಾಮಿಗಳು ಘನಮಠೇಶ್ವರ ಮಠ ಸಂತೇಕೆಲ್ಲೂರು ನೆರವೇರಿಸಿ ಮಾತಾನಾಡಿ ಅಮರೇಗೌಡ ಮಾ ಪಾ ಮುಖ್ಯಗುರುಗಳು ತಮ್ಮ ಸುಧೀರ್ಘ 28 ವರ್ಷಗಳ ಕಾಲ ಪವಿತ್ರ ಶಿಕ್ಷಕ ವೃತ್ತಿಯಲ್ಲಿ ಸೇವೆಸಲ್ಲಿಸಿ ಸಾವಿರಾರು ವಿದ್ಯಾರ್ಥಿಗಳಿಗೆ ಅಕ್ಷರ ಜ್ಞಾನ ಕರುಣಿಸಿ,ಅತ್ಯುತ್ತಮ ಸೇವೆ ಸಲ್ಲಿಸಿದ್ದು ಹೆಮ್ಮೆಯ ಸಂಗತಿ, ಮುಂದಿನ ತಮ್ಮ ನಿವೃತ್ತಿ ಜೀವನ ಆರೋಗ್ಯ, ಸುಖಕರದಿಂದ ಕೂಡಿರಲ್ಲಿ ಎಂದು ಹೇಳಿದರು. ಸಾನಿದ್ಯವನ್ನು ಶ್ರೀ ಬೂದಿಬಸವ ಶಿವಚಾರ್ಯ ಸ್ವಾಮಿಗಳು ಗಬ್ಬೂರು,ಶ್ರೀ ಮರಿಬಸವರಾಜ ದೇಶಿಕೇಂದ್ರ ಸ್ವಾಮಿಗಳು ಉಟಕನೂರು, ಶ್ರೀ ಬಸವ ಪ್ರಸಾದ ಶರಣರು ಇರಕಲ್ ಮಠ, ಸಣ್ಣಮಾಳಪ್ಪ ಎಸ್ಡಿಎಮ್ಸಿ ಅದ್ಯಕ್ಷ,ಮುಖ್ಯ ಅತಿಥಿಗಳಾಗಿ ಬಸವಂತರಾಯಕುರಿ ಲಿಂಗಸೂರು,ಚಂದ್ರಶೇಖರ ತಾಲ್ಲೂಕು ದೈಹಿಕ ಅಧಿಕಾರಿ, ಪಂಪಾಪತಿ ಹೂಗಾರ,ಕಳಕಪ್ಪ ಹಾದಿಮನಿ,ಮಂಜುನಾಥ ಹಾಲಾಪೂರ ಮುಖ್ಯಗುರು,ಶೇಖರಪ್ಪಗೌಡ ಹೂಲ್ಲುರು,ಬಸಪ್ಪ ಹಂದ್ರಾಳ ಉಪನ್ಯಾಸಕರು ಹಾಗೂ ಇನ್ನಿತರರು ಇದ್ದರು.

## "ಅಶೋಕ ಲಾಂಛನ ಪ್ರತಿಮೆ ಉದ್ಘಾಟನೆ"

❑ ನೈಜ್ಯ ದೆಸೆ ನ್ಯೂಸ್

**ಕವಿತಾಳದಲ್ಲಿ ಸ್ಥಾಪಿಸಿದ ಅಶೋಕ ಲಾಂಛನ ಪ್ರತಿಮೆಯನ್ನು ಎಸ್ಐ ಗುರುಚಂದ್ರ ಯಾದವ ಉದ್ಘಾಟಿಸಿದರು. ಕವಿತಾಳ –: 'ದೇಶದ ಹೆಮ್ಮೆಯ ಅಶೋಕ ಲಾಂಛನ ಪ್ರತಿಮೆಯನ್ನು ಸ್ವಂತ ಖರ್ಚಿನಲ್ಲಿ ನಿರ್ಮಿಸಿದ ಕಾಳಪ್ಪ ಪತ್ತಾರ ಅವರ ಕಾರ್ಯ ಶ್ಲಾಘನೀಯ' ಎಂದು ಎಸ್ ಐ ಗುರುಚಂದ್ರ ಯಾದವ ಹೇಳಿದರು.**



ಪಟ್ಟಣದ ಪೊಲೀಸ್ ಠಾಣೆ ಎದುರು ರಸ್ತೆ ವಿಭಜಕದಲ್ಲಿ ಕಾಳಪ್ಪ ಅವರು ನಿರ್ಮಿಸಿದ ಅಶೋಕ ಲಾಂಛನ ಪ್ರತಿಮೆಯನ್ನು ಶುಕ್ರವಾರ ಉದ್ಘಾಟಿಸಿ ಮಾತನಾಡಿದ ಅವರು, 'ಬೃಹತ್ ಗಾತ್ರದ ಕನ್ನಡಾಂಬೆ ಮೂರ್ತಿಯನ್ನು ಶಾಲೆಗೆ ದೇಣಿಗೆ ನೀಡಿರುವ ಅವರ ನಡೆ ಮಾದರಿಯಾಗಿದೆ' ಎಂದರು. ಈ ಸಂದರ್ಭದಲ್ಲಿ ಕಲೆಗಾರರಾದ ಕಾಳಪ್ಪ ಪತ್ತಾರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಎಎಸ್ಐ ಹೇಮಂತ, ಹೆಡ್ ಕಾನ್ಸ್ಟೇಬಲ್ ರಾಜ್ ಮಹಮದ್ ಹಾಗೂ ಪೊಲೀಸ್ ಸಿಬ್ಬಂದಿ, ಮುಖಂಡರಾದ ತಿಪ್ಪಯ್ಯ ಸ್ವಾಮಿ, ಮಾನಸಿಂಗ್, ಅಯ್ಯಪ್ಪ ಕಂಬಾರ, ಮಾನಪ್ಪ ಉಪ್ಪಳ, ಅಮರಗುಂಡಪ್ಪ, ರಮೇಶ ಬಡಿಗೇರ, ಮೌನೇಶ ಪತ್ತಾರ, ಶ್ರೀಧರ ಬಡಿಗೇರ, ಈಶಪ್ಪ ಚಿಕ್ಕದಿನ್ನಿ, ಶ್ರೀಶೈಲಪ್ಪ ಬಡಿಗೇರ, ಈರಣ್ಣ, ರಮೇಶ ಮಡಿವಾಳ, ರಫಿ ಒಂಟಿಬಂಡಿ ಮತ್ತಿತರರು ಉಪಸ್ಥಿತರಿದ್ದರು.

# ವಿಶ್ವ ಝೂನೋಸಿಸ್ ದಿನ ಆಚರಣೆ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕುರುಗೋಡು: ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾ ಆಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನಮ್ಮ ಕ್ಲಿನಿಕ್ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಕುರುಗೋಡು ಇವರ ಸಹಯೋಗದಲ್ಲಿ ಸೋಮವಾರ ತಾಲೂಕು ಸಮುದಾಯ ಅರೋಗ್ಯ ಸಭಾಭವನದಲ್ಲಿ ವಿಶ್ವ ಝೂನೋಸಿಸ್ ದಿನಾಚರಣೆಯನ್ನು ಆಚರಿಸಲಾಯಿತು.**

ದಂತ ವೈದ್ಯಾಧಿಕಾರಿಗಳಾದ ಡಾ॥ಗಾಯತ್ರಿ ಮಾತನಾಡಿ, 1885ರ ಜೂಲೈ 6 ರಂದು ಪ್ರಾಣಿಗಳಿಂದ ಮನುಷ್ಯರಿಗೆ ಹರಡುವ ಝೂನೋಟಿಕ್ ಖಾಯಿಲೆಯಾದ ರೇಬೀಸ್ ರೋಗಕ್ಕೆ ಮೊದಲ ಲಸಿಕೆಯನ್ನು ಸರ್ ಲೂಯಿಸ್ ಪಾಶ್ಚರ್‌ರವರು ಯಶಸ್ವಿಯಾಗಿ



ನೀಡಿದ ಸಂದರ್ಭದ ಸ್ಮರಣಾರ್ಥವಾಗಿ ವಿಶ್ವ ಝೂನೋಸಿಸ್ ದಿನವನ್ನು ಆಚರಿಸಲಾಯಿತು. ಈ ವರ್ಷದ ಘೋಷವಾಕ್ಯ ಒಟ್ಟಾಗಿ ಕಾರ್ಯನಿರ್ವಹಿಸೋಣ ಸಮುದಾಯದ ಕ್ರಿಯಾಶೀಲತೆಯ ಮೂಲಕ ಝೂನೋಟಿಕ್ ರೋಗಗಳನ್ನು ತಡೆಗಟ್ಟೋಣ ಎಂದು ತಿಳಿಸಿದರು. ತಾಲೂಕಿನ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿ ಸಭೆಯನ್ನು ಹಮ್ಮಿಕೊಂಡು ಪ್ರಾಣಿಗಳಿಂದ ಮನುಷ್ಯರಿಗೆ ಹರಡುವ ಮಾರಾಣಾಂತಿಕ ಖಾಯಿಲೆಗಳಿಂದ ಮಾನವರನ್ನು ರಕ್ಷಿಸಲು ಸೂಕ್ತ ಕ್ರಮಗಳ ಬಗ್ಗೆ ಗ್ರಾಮದ ಎಲ್ಲಾ ರೈತರು ಮತ್ತು ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಲು ಸಭೆಯಲ್ಲಿ ಸೂಚಿಸಲಾಯಿತು.

ಕಾರ್ಯಕ್ರಮದಲ್ಲಿ ಸಮುದಾಯ ಕೇಂದ್ರದ ವೈದ್ಯಧಿಕಾರಿಗಳಾದ ರೋಹಿಣಿ, ಜಿ.ಪಲ್ಲವಿ. ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಕೆ.ಮಂಜುನಾಥ, ಷಡಕ್ಷರಯ್ಯ ಸ್ವಾಮಿ,ಮಹೇಂದ್ರ ಕುಮಾರ್ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಾದ ಡಿ.ಸುನೀತಾ, ಗಿರಿಜಾ, ರೇಣುಕಾ, ಜಯಶ್ರೀ ಸೇರಿದಂತೆ ಶುಶ್ರೂಷಣಾಧಿಕಾರಿಗಳು, ಸಹ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆ,ಕಿಶೋರಿಯರು, ಗರ್ಭಿಣಿಯರು,ಮಹಿಳೆಯರು ಹಿರಿಯರು ಇತರರಿದ್ದರು.

# ಕಂಪ್ಲಿಯಲ್ಲಿ ಡಾ.ಶ್ಯಾಮ್ ಪ್ರಸಾದ್ ಮುಖರ್ಜಿ ಜನ್ಮದಿನಾಚರಣೆ




❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಪಟ್ಟಣದ ಕೊಟ್ಟಾಲ್ ರಸ್ತೆಯ ಮಾಜಿ ಶಾಸಕ ಟಿ.ಎಚ್.ಸುರೇಶ್ ಬಾಬು ಅವರ ನಿವಾಸದ ತುಂಗಭದ್ರ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿಯ ಸಂಸ್ಥಾಪಕ ಹಾಘೂ ಹಿರಿಯ ರಾಜಕಾರಣಿ ಡಾ.ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಜನ್ಮದಿನವನ್ನು ಸೋಮವಾರ ಅರ್ಥಪೂರ್ಣವಾಗಿ ಆಚರಿಸಿದರು.**

ನಂತರ ಕಂಪ್ಲಿ ವಿಧಾನಸಭಾ ಕ್ಷೇತ್ರದ ಭಾರತೀಯ ಜನತಾ ಪಾರ್ಟಿಯ ಬಿಎಲ್ಎ1 ಗುರ್ತಿ ಶ್ರೀನಿವಾಸ ಮಾತನಾಡಿ, ಜಗತ್ತಿಗೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಉತ್ತಮ ಜೀವನ ನಡೆಸಬೇಕು. ಪೋಷಕರು ಮಕ್ಕಳಿಗೆ ಒಳ್ಳೆಯ ಶಿಕ್ಷಣ ಕೊಡಿಸಿದಾಗ ಮಾತ್ರ ದೇಶದ ಉತ್ತಮ ಪ್ರಜೆಗಳಾಗಿ ಹೊರ ಹೊಮ್ಮಲು ಸಾಧ್ಯ. ಬಿಜೆಪಿ ಪಕ್ಷ ವಿಶ್ವದಲ್ಲೇ ಅತಿಹೆಚ್ಚು ಸದಸ್ಯತ್ವ ಹೊಂದಲು ಭದ್ರ ಬುನಾದಿ ಹಾಕಿಕೊಟ್ಟವರು ಧೀಮಂತ ನಾಯಕ ಡಾ.ಶ್ಯಾಮ್ ಪ್ರಸಾದ್ ಮುಖರ್ಜಿಯಾಗಿದ್ದಾರೆ. ಅವರು ರಾಜಕೀಯ ಚತುರರಾಗಿದ್ದರು. ನ್ಯಾಯವಾದಿ ಮತ್ತು ಶಿಕ್ಷಣತಜ್ಞರಾಗಿದ್ದು, ನಮ್ಮ ದೇಶದ ಸರ್ವತೋಮುಖ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುವ ನಿಟ್ಟಿನಲ್ಲಿ ಮಾಡಿದ ಕಾರ್ಯಗಳು ಸ್ಮರಣೀಯ ಎಂದರು. ಇಲ್ಲಿ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪ ನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ, ಮುಖಂಡರಾದ ಅಳ್ಳಳ್ಳಿ ವಿರೇಶ, ಎಸ್.ಚಂದ್ರಶೇಖರಗೌಡ, ಬಂಡಿ ಸಿದ್ದಪ್ಪ, ಮನೋಜ್‌ಗೌಡ, ಪಕ್ಕೀರಪ್ಪ, ಪ್ರಶಾಂತ್, ಬಸವಪ್ರಭು, ಕಟ್ಟೆ ವಿಶ್ವ, ಮುರಳಿರೆಡ್ಡಿ,ಅಶೋಕ, ಬಿ. ರಮೇಶ, ಎಸ್.ಆರ್.ಕಾರ್ತಿಕ, ಭಾಸ್ಕರ್, ವಿರುಪಾಕ್ಷಿ ಸೇರಿದಂತೆ ಅನೇಕರಿದ್ದರು.

# ಬೆಳಕು ಟ್ರಸ್ಟನಿಂದ ಶಾಲೆಗಳಿಗೆ ಕಂಪ್ಯೂಟರ್ ವಿತರಣೆ"

❑ ನೈಜ್ಯ ದೆಸೆ ನ್ಯೂಸ್

**ಸಿರವಾರ: 'ಗ್ರಾಮೀಣ ಮಕ್ಕಳು ತಂತ್ರಜ್ಞಾನದಲ್ಲಿ ಹಿಂದೆ ಬೀಳಬಾರದು. ಕಂಪ್ಯೂಟರ್ ಶಿಕ್ಷಣದಿಂದ ಅವರಲ್ಲಿ ಆತ್ಮವಿಶ್ವಾಸ ಹೆಚ್ಚಾಗಿ ಭವಿಷ್ಯ ಉಜ್ವಲವಾಗಲಿ ಎಂಬುದೇ ನಮ್ಮ ಉದ್ದೇಶ' ಎಂದು ಭರವಸೆಯ ಬೆಳಕು ಟ್ರಸ್ಟ್ ಅಧ್ಯಕ್ಷ ಸುನಿಲ್ ಗೌಡ ಹೇಳಿದರು.**

ತಾಲ್ಲೂಕಿನ ಕುರುಕುಂದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗೆ ಟುನರ್ ಇಂಟರ್‌ನ್ಯಾಷನಲ್ ಕಂಪನಿ ಸಹಯೋಗದಲ್ಲಿ ಟ್ರಸ್ಟ್ ವತಿಯಿಂದ 10 ಕಂಪ್ಯೂಟರ್‌ಗಳನ್ನು ಬುಧವಾರ



ಉಚಿತವಾಗಿ ವಿತರಿಸಿ ಮಾತನಾಡಿದರು. 'ನಗರದ ಮಕ್ಕಳಿಗೆ ಸಿಗುವ ಸೌಲಭ್ಯ ಹಳ್ಳಿ ಮಕ್ಕಳಿಗೂ ಸಿಗಬೇಕು. ಡಿಜಿಟಲ್ ಯುಗದಲ್ಲಿ ಗ್ರಾಮೀಣ ವಿದ್ಯಾರ್ಥಿಗಳೂ ಸ್ಪರ್ಧಾತ್ಮಕ ಜಗತ್ತಿಗೆ ಸಿದ್ಧರಾಗಬೇಕು. ಇದಕ್ಕಾಗಿ ನಮ್ಮ ಟ್ರಸ್ಟ್ ನಿರಂತರವಾಗಿ ಶ್ರಮಿಸುತ್ತದೆ' ಎಂದರು. ಮುಖ್ಯಶಿಕ್ಷಕ ನಾಗಲಿಂಗಪ್ಪ ಮಾತನಾಡಿ, 'ಗ್ರಾಮೀಣ ಮಕ್ಕಳ ವೈಜ್ಞಾನಿಕ ಬೆಳವಣಿಗೆಗೆ ಈ ಕೊಡುಗೆ ಸಹಾಯಕ. ಟ್ರಸ್ಟ್ ಹಾಗೂ ಕಂಪನಿಗೆ ಧನ್ಯವಾದಗಳು' ಎಂದರು.

ಪ್ರೌಢಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಶೇಖರಪ್ಪ ಗೌಡ ಮಾಲಿಪಾಟೀಲ, ಪ್ರಾಥಮಿಕ ಶಾಲೆ ಎಸ್‌ಡಿಎಂಸಿ ಅಧ್ಯಕ್ಷ ಶರಣಬಸವ, ಪ್ರಾಚಾರ್ಯ ಮಲ್ಲಪ್ಪ, ಶಿಕ್ಷಕರು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

# "ಚರಂಡಿ ಮಯವಾದ ಸಂತೆ ಮಾರ್ಕೆಟ್ ಮುಖ್ಯ ರಸ್ತೆ"

## ಕವಿತಾಳದ ತಪ್ಪಲದೊಡ್ಡಿ ಅಗಸಿ ಮುಖ್ಯ ರಸ್ತೆಯಲ್ಲಿ ಚರಂಡಿ ನೀರು ಹರಿಯುತ್ತಿದೆ.

❑ ನೈಜ್ಯ ದೆಸೆ ನ್ಯೂಸ್

**ಕವಿತಾಳ: ಪಟ್ಟಣದ ಮುಖ್ಯ ಹೆದ್ದಾರಿಯ ಹಳೆ ಬಸ್ ನಿಲ್ದಾಣದ ಶಿವಪ್ಪ ತಾತನ ಮಠದಿಂದ ತೊಪ್ಪಲದೊಡ್ಡಿ ಅಗಸಿ ಕಡೆಗೆ ಹೋಗುವ ಮುಖ್ಯ ರಸ್ತೆಯ ಮಧ್ಯೆ ಚರಂಡಿ ನೀರು ರಸ್ತೆ ಮೇಲೆ ಹರಿಯುತ್ತಿರುವುದು ಸಾರ್ವಜನಿಕರಿಗೆ ಹಾಗೂ ವಾಹನ ಸವಾರರ ಸಂಚಾರಕ್ಕೆ ದೊಡ್ಡ ಸಮಸ್ಯೆಯಾಗಿದೆ.**

ಚರಂಡಿಗಿಂತ ರಸ್ತೆ ಕೆಳಮಟ್ಟದಲ್ಲಿ ಇದ್ದು ಅಲಲ್ಲಿ ಹಳೆ ಚರಂಡಿ ಕಿತ್ತು ಹೋಗಿದ್ದು ಪ್ರತಿ ದಿನ ನೀರು ಹೆಚ್ಚಾಗಿ ಹರಿದರೆ ಆ ನೀರು ರಸ್ತೆ ಮೇಲೆ ಹರಿಯುತ್ತದೆ. ಚರಂಡಿ ನೀರಿನಿಂದ ರಸ್ತೆ ಸಂಪೂರ್ಣ ಕೆಸರುಮಯವಾಗಿ ವಾಹನ ಸವಾರರು ಹಾಗೂ ಪಾದಚಾರಿಗಳು ಪ್ರತಿದಿನ ತೊಂದರೆ ಅನುಭವಿಸುತ್ತಿದ್ದಾರೆ. ಮಳೆ ಬಂದಾಗ ಪರಿಸ್ಥಿತಿ ಇನ್ನಷ್ಟು ಹದಗೆಟ್ಟು ರಸ್ತೆ ಎಲ್ಲಿದೆ, ಚರಂಡಿ ಎಲ್ಲಿದೆ ಎಂಬುದೇ ತಿಳಿಯದಂತಾಗಿ ದ್ವಿಚಕ್ರ ವಾಹನ ಸವಾರರು, ಹಿರಿಯರು, ಚಿಕ್ಕ ಮಕ್ಕಳು ಬಿದ್ದು ಗಾಯ ಮಾಡಿಕೊಂಡ ಹಲವು ಘಟನೆಗಳು ನಡೆದಿವೆ.



ಇಂತಹ ಕಲುಷಿತ ನೀರು ಹರಿಯುತ್ತಿರುವ ಕಾರಣ ದುರ್ವಾಸನೆ, ಸೊಳ್ಳೆಗಳ ಹೆಚ್ಚಳ ಹಾಗೂ ವಿವಿಧ ಸಾಂಕ್ರಾಮಿಕ ರೋಗಗಳ ಭೀತಿ ಉಂಟಾಗುತ್ತಿದೆ. ಶಾಲಾ ಮಕ್ಕಳು, ವೃದ್ಧರು ಮತ್ತು ಮಹಿಳೆಯರು ಈ ರಸ್ತೆಯಲ್ಲಿ ಸಂಚರಿಸಲು ಬಹಳ ಕಷ್ಟಪಡುತ್ತಿದ್ದಾರೆ. ಪ್ರತಿದಿನ ಇದೇ ರಸ್ತೆಯಲ್ಲಿ ಓಡಾಡುವ ಜನರು ಹಾಗೂ ಮುಖಂಡರು ಪಟ್ಟಣ ಪಂಚಾಯತಿ ಅಧಿಕಾರಿಗಳ ಗಮನಕ್ಕೆ ತಂದು ಹಲವು ಬಾರಿ ಮನವಿ ಮಾಡಿದರೂ, ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಾಣಿಸುತ್ತಿಲ್ಲ ಸಾರ್ವಜನಿಕರು ತೀವ್ರ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ಸ್ವಚ್ಛತೆ ಮತ್ತು ಉತ್ತಮ ರಸ್ತೆ ವ್ಯವಸ್ಥೆ ಪ್ರತಿಯೊಬ್ಬ ನಾಗರಿಕನ ಹಕ್ಕಾಗಿದೆ. ಆದ್ದರಿಂದ ಸಂಬಂಧಪಟ್ಟ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಾಗೂ ಜನಪ್ರತಿನಿದಿನಗಳು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಚರಂಡಿ ನೀರು ರಸ್ತೆ ಮೇಲೆ ಹರಿಯದಂತೆ ಶಾಶ್ವತ ವ್ಯವಸ್ಥೆ ಮಾಡಬೇಕು. ಜನರ ಸುರಕ್ಷತೆ ಮತ್ತು ಆರೋಗ್ಯದ ದೃಷ್ಟಿಯಿಂದ ಈ ಸಮಸ್ಯೆಗೆ ಆದಷ್ಟು ಬೇಗ ಪರಿಹಾರ ದೊರಕಿಸದಿದ್ದರೆ ಪಟ್ಟಣ ಪಂಚಾಯತಿ ಕಚೇರಿಗೆ ಬೀಗ ಹಾಕಿ ತೀವ್ರ ಪ್ರತಿಭಟನೆ ಮಾಡುವುದಾಗಿ ಸ್ಥಳೀಯರು ಎಚ್ಚರಿಕೆ ನೀಡಿದ್ದಾರೆ.

# ರಾಯಚೂರು ಬರಪೀಡಿತ ಜಿಲ್ಲೆ ಎಂದು ಘೋಷಿಸಿ' ಕರ್ನಾಟಕ ರೈತ ಸಂಘ ಒತ್ತಾಯ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ರಾಯಚೂರು ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಬೇಕು ಹಾಗೂ ನಮ್ಮ ಜನರನ್ನು ಬೆಂಗಳೂರು, ಮಂಗಳೂರು, ಆಂದ್ರಪ್ರದೇಶಕ್ಕೆ ಗುಳೆ ಹೋಗುವುದನ್ನು ತಡೆಗಟ್ಟಲು ಈ ಹಿಂದೆ ಜಾರಿಯಲ್ಲಿದ್ದ ಮನರೇಗಾ ಯೋಜನೆ ಜಾರಿಗೊಳಿಸಬೇಕು ಎಂಬುದು ಸೇರಿದಂತೆ ಮತ್ತಿತರ ಪ್ರಮುಖ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರೈತ ಸಂಘದ (ಎಐಯುಕೆಎಸ್) ತಾಲ್ಲೂಕು ಘಟಕದಿಂದ ತಹಶೀಲ್ದಾರ್ ಕಚೇರಿ ಮುಂದೆ ಪ್ರತಿಭಟಿಸಿ ಶಿರಸ್ತೇದಾರ್ ವಾಣಿ ಅವರ ಮೂಲಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರಿಗೆ ಮನವಿ ಪತ್ರ ಸಲ್ಲಿಸಿದರು.**

'ಈ ಭಾರಿ ಮಳೆ ಸಂಪೂರ್ಣ ವಿಫಲವಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಪ್ರತಿವರ್ಷ ಮೇ ಮತ್ತುಜೂನ್ ತಿಂಗಳಲ್ಲಿ ಬಿತ್ತನೆ




ಕಾರ್ಯಗಳು ಆರಂಭವಾಗುತ್ತಿದ್ದವು. ಆದರೆ ಮಳೆ ಬಾರದ ಕಾರಣ ಕೃಷಿ ಚಟುವಟಿಕೆಗಳು ಸಂಪೂರ್ಣ ನಿಂತು ಹೋಗಿವೆ. ಇದರಿಂದ ರೈತರು, ಕಾರ್ಮಿಕರು ಹಾಗೂ ದುಡಿಯುವ ವರ್ಗ ಆರ್ಥಿಕ ಬಿಕ್ಕಟ್ಟಿಗೆ ಸಿಲುಕಿದೆ. ಆದಕಾರಣ ರಾಜ್ಯವನ್ನು ಸಂಪೂರ್ಣ ಬರಪೀಡಿತ ಪ್ರವೇಶವೆಂದು ಘೋಷಿಸಬೇಕು ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಳಂಬ ಮಾಡದೇ ಬರ ಪರಿಹಾರ ಜಾರಿಗೊಳಿಸಬೇಕು' ಎಂದು ತಾಲ್ಲೂಕು ಘಟಕದ ಅಧ್ಯಕ್ಷ ರಮೇಶ ಪಾಟೀಲ್ ಭೇರಿಗಿ ಆಗ್ರಹಿಸಿದರು.

ಸಿಪಿಐ(ಎಂಎಲ್) ಮಾಸ್‌ಲೈನ್ ಜಿಲ್ಲಾ ಘಟಕದ ಕಾರ್ಯದರ್ಶಿ ಬಿ.ಎನ್.ಯರದಿಹಾಳ ಮಾತನಾಡಿ 'ಬರಗಾಲದಿಂದಾಗಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೆರೆಗಳು ತಳ ಕಂಡಿದ್ದು, ನೀರು ಸರಬರಾಜು ಬಹುತೇಕ ಕಡೆ ಸ್ಥಗಿತಗೊಂಡಿದೆ. ಹಳ್ಳ–ಕೊಳ್ಳ ಹಾಗೂ ಕೆರೆ–ಕಟ್ಟೆಗಳು ಬತ್ತಿ ಹೋಗಿವೆ. ಇದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿಗಾಗಿ ಜನ–ಜಾನು–ವಾರುಗಳು ಹಾಹಾಕಾರ ಎದುರಿಸುತ್ತಿದ್ದಾರೆ. ಕೂಡಲೇ ಜಿಲ್ಲಾಡಳಿತ ನೀರಿನ ಸಮಸ್ಯೆ ಪರಿಹರಿಸಲು ಮುಂದಾಗಬೇಕು' ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ರಾಜ್ಯದ ಎಲ್ಲ ಜಿಲ್ಲೆಗಳನ್ನು ಬರಗಾಲ ಪೀಡಿತ ಪ್ರದೇಶಗಳೆಂದು ಘೋಷಿಸಿ ಸಣ್ಣ ರೈತರಿಗೆ ಪ್ರತಿ ಎಕರೆಗೆ 25 ಸಾವಿರ ಪರಿಹಾರ ನೀಡಬೇಕು. ರೈತರ ಸಾಲವನ್ನು ಮನ್ನಾ ಮಾಡಬೇಕು. ಜಾನುವಾರು ಸಾಕಣೆದಾರರ ಮನೆ ಮನೆಗೆ ಮೇವು ಸರಬರಾಜು ಮಾಡಬೇಕು' ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ: ಸದಸ್ಯರಾದ ರಮೇಶ ಬಸಾಪುರ ಮಹಾದೇವ ಅಮರಾಪುರ, ಗಂಗರಾಜ ಭೀಮರಾಜ ಕ್ಯಾಂಪ್, ನಿಂಗಪ್ಪ ಚಿಕ್ಕಭೇರಿಗಿ, ಬಾಲಾಜಿ ಉದ್ಬಾಳ, ಬಸಪ್ಪ ಕಡಬೂರು, ವೆಂಕಟೇಶ ಉದ್ಬಾಳ, ಅಸ್ಲಂ, ಯಮನೂರಪ್ಪ ರತ್ನಾಪುರ ಹಟ್ಟಿ, ಕಾಶಿಮಸಾಬ್, ಮರಿಯಪ್ಪ ನಾಯಕ ಭೇರಿಗಿ, ಕರಿಯಪ್ಪ ತುರ್ವಿಹಾಳ, ನಿಂಗಪ್ಪ ಕೆ, ಲಾಲಸಾಬ್ ಜಿಲೇಬಿ, ಮಹ್ಮದ್ ಅಲಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### B.V.Sc. & A.H. (ಬ್ಯಾಚುಲರ್ ಆಫ್ ವೆಟರಿನರಿ ಸೈನ್ಸ್ & ಅನಿಮಲ್ ಹಸ್ಬೆಂಡ್ರಿ)

ಎಂಬುದು ಪ್ರಾಣಿಗಳ ವೈದ್ಯಕೀಯ, ಆರೋಗ್ಯ ಸಂರಕ್ಷಣೆ, ರೋಗಗಳ ತಡೆ, ಚಿಕಿತ್ಸೆ ಹಾಗೂ ಪಶುಪಾಲನೆ ಕುರಿತ ವೃತ್ತಿಪರ ಪದವಿ ಕೋರ್ಸ್ ಆಗಿದೆ. ಈ ಪದವಿಯನ್ನು ಪೂರ್ಣಗೊಳಿಸಿದವರು ಪಶುವೈದ್ಯರಾಗಿ (Veterinary Doctor) ಕಾರ್ಯನಿರ್ವಹಿಸಬಹುದು. Veterinary Council of India ಕೋರ್ಸ್ ಅವಧಿ ಒಟ್ಟು 5ಳಿ ವರ್ಷ 4ಳಿ ವರ್ಷ ಶೈಕ್ಷಣಿಕ ಅಧ್ಯಯನ 1 ವರ್ಷ ಕಡ್ಡಾಯ ಇಂಟರ್ನ್‌ಶಿಪ್ ಅರ್ಹತೆ ದ್ವಿತೀಯ ಪಿಯುಸಿ (10+2) ಅಥವಾ ಸಮಾನ ಪರೀಕ್ಷೆಯಲ್ಲಿ ಭೌತಶಾಸ್ತ್ರ (Physics), ರಸಾಯನಶಾಸ್ತ್ರ (Chemistry), ಜೀವಶಾಸ್ತ್ರ (Biology) ಹಾಗೂ ಇಂಗ್ಲಿಷ್ ವಿಷಯಗಳನ್ನು ಓದಿರಬೇಕು.ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಸಾಮಾನ್ಯವಾಗಿ 50% ಅಂಕಗಳು ಅಗತ್ಯ (ವರ್ಗಾನುಸಾರ ಸಡಿಲಿಕೆ ಇರಬಹುದು).Careeŗ360 ಪ್ರಮುಖ ವಿಷಯಗಳು ಪಶು ಶರೀರ ರಚನೆ (Veterinary Anatomy) ಪಶು ಶರೀರ ಕ್ರಿಯಾಶಾಸ್ತ್ರ (Physiology) ಪಶು ರೋಗಶಾಸ್ತ್ರ (Pathology) ಪಶು ಔಷಧಶಾಸ್ತ್ರ (Pharmacology) ಶಸ್ತ್ರಚಿಕಿತ್ಸೆ (Surgery) ಪಶು ವೈದ್ಯಕೀಯ (Veterinary Medicine) ಪಶು ಪೋಷಣೆ (Animal Nutrition) ಪಶು ಸಂತಾನೋತ್ಪತ್ತಿ (Animal Breeding) ಹೈನುಗಾರಿಕೆ ಮತ್ತು ಪಶುಪಾಲನೆ ಕೋಳಿ ಸಾಕಣೆ ಹಾಗೂ ಪಶು ಉತ್ಪನ್ನ ತಂತ್ರಜ್ಞಾನ

Veterinary Council of India

ಉದ್ಯೋಗಾವಕಾಶಗಳು

ಪಶುವೈದ್ಯ (Veterinary Doctor)

ಸರ್ಕಾರಿ ಪಶುವೈದ್ಯಾಧಿಕಾರಿ

ಪಶು ಆಸ್ಪತ್ರೆಗಳು

ಡೈರಿ, ಕೋಳಿ ಮತ್ತು ಪಶುಸಂಗೋಪನಾ ಸಂಸ್ಥೆಗಳು

ಔಷಧ ಮತ್ತು ಲಸಿಕೆ ತಯಾರಿಕಾ ಕಂಪನಿಗಳುಸಂಶೋಧನಾ ಸಂಸ್ಥೆಗಳು ಖಾಸಗಿ ಕ್ಲಿನಿಕ್ ಆರಂಭಿಸುವ ಅವಕಾಶ Veterinary Council of India ಮುಂದಿನ ವಿದ್ಯಾಭ್ಯಾಸ

M.V.Sc. (Master of Veterinary Science)

ಪಿಎಚ್.ಡಿ.ಸಂಶೋಧನೆ ಹಾಗೂ ವಿಶೇಷ ವೈದ್ಯಕೀಯ ತರಬೇತಿ

Veterinary Council of India ವೇತನ ಆರಂಭಿಕ ಹಂತದಲ್ಲಿ ವಾರ್ಷಿಕ ಸುಮಾರು ?3?6 ಲಕ್ಷ ಅಥವಾ ಅನುಭವ ಹಾಗೂ ಉದ್ಯೋಗದ ಪ್ರಕಾರ ಹೆಚ್ಚಿನ ವೇತನ ಪಡೆಯಬಹುದು. ಸರ್ಕಾರಿ ಹುದ್ದೆಗಳಲ್ಲಿ ಉತ್ತಮ ವೇತನ ಮತ್ತು ಭತ್ಯೆಗಳು ಲಭ್ಯ.

## ಸ್ಮರಣ ಸಂಚಿಕೆ ಬಿಡುಗಡೆ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಕರ್ನಾಟಕ ರಾಜ್ಯ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷರು ಹಾಗೂ ಮುದ್ದೇಬಿಹಾಳ ಮತಕ್ಷೇತ್ರ ಶಾಸಕರಾದ ಸಿ.ಎಸ್.ನಾಡಗೌಡ ಅಪ್ಪಾಜಿಯವರು ದೇವರ ಹಿಪ್ಪರಗಿ ಮತಕ್ಷೇತ್ರದ



ಯಾಳವಾರ ಗ್ರಾಮದಲ್ಲಿ ಶ್ರೀ ಸೋಮೇಶ್ವರ ವಿದ್ಯಾವರ್ಧಕ ಸಂಘದ ಸುವರ್ಣ ಮಹೋತ್ಸವ ಅಂಗವಾಗಿ ಹೊರ ತಂದ ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಿದರು. ಬಾಳೆಹೊನ್ನೂರ ಪೀಠದ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದರು. ಶ್ರೀ ಸೋಮೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷ ರಾಜುಗೌಡ ನಾಡಗೌಡ್ರು ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಹಲವಾರು ಪರಮ ಪೂಜ್ಯರು, ವಿವಿಧ ಪಕ್ಷಗಳ ಮುಖಂಡರು, ಸಂಘ ಸಂಸ್ಥೆಗಳ ಮುಖ್ಯಸ್ಥರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಕಲಕೇರಿಯಿಂದ ಸಾತಾರ ಬಸ್ ಸೇವೆ ಆರಂಭ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ತಾಲೂಕಿನ ಕಲಕೇರಿ ಗ್ರಾಮದಿಂದ ವಿಜಯಪುರ ಮಾರ್ಗವಾಗಿ ಮಹಾರಾಷ್ಟ್ರದ ಕರಾಡ್ ಜತ್ ಹಾಗೂ ಸಾತಾರ್ ಗೆ ಹೋಗುವ ನೂತನ ರಸ್ತೆ ಸಾರಿಗೆ ಬಸ್ ನ ಸೇವೆ ಆರಂಭವಾಗಿದೆ.




ಈ ನೂತನ ಬಸ್ ಸೇವೆ ಜುಲೈ 5 ಸೋಮವಾರದಿಂದ ಆರಂಭಗೊಂಡಿದ್ದು ಬಸ್ಸು ವಿಜಾಪುರದಿಂದ ಬೆಳಿಗ್ಗೆ 7:30ಕ್ಕೆ ದೇವರ ಹಿಪ್ಪರಗಿ ಮಾರ್ಗವಾಗಿ ಬಿಬಿ ಇಂಗಳಗಿ ಗ್ರಾಮದ ಮೂಲಕ ಕಲಕೇರಿಗೆ ತಲುಪುವುದು. ನಂತರ ಅಲ್ಲಿಂದ ಬೆಳಗ್ಗೆ 9–30ಕ್ಕೆ ವಿಜಯಪುರ ಮಾರ್ಗವಾಗಿ ಜತ್, ವೀಟಾ, ಕರಣ್, ಸಾತಾರಕ್ಕೆ ಹೋಗುವುದು. ನೂತನ ಬಸ್ಸಿನ ಸೇವೆ ಆರಂಭಿಸುವ ಮುನ್ನ ಕಲಿಕೇರಿ ಗ್ರಾಮಸ್ಥರು ಬಸ್ಸನ್ನು ಗ್ರಾಮದ ಶ್ರೀ ವೀರಗಂಟಿ ಮಡಿವಾಳೇಶ್ವರ ದೇವಸ್ಥಾನದ ಮುಂದೆ ನಿಲ್ಲಿಸಿ ವಿಶೇಷ ಪೂಜೆಯನ್ನು ವಿವರಿಸಿದರು. ಇದೇ ಸಂದರ್ಭದಲ್ಲಿ ಬಸ್ಸಿನ ನೂತನ ಚಾಲಕ ನಿರ್ವಾಹಕ ಹಾಗೂ ಬಸ ನಿಲ್ದಾಣದ ನಿಯಂತ್ರಣಾಧಿಕಾರಿಗೆ ಸನ್ಮಾನಿಸಿ ಗೌರವಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಡಾ.ಬಾಬು ಜಗಜೀವನ ರಾಮ್ ಅವರ ಪುಣ್ಯಸ್ಮರಣೆ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಹಸಿರು ಕ್ರಾಂತಿಯ ಹರಿಕಾರ, ದೇಶ ಕಂಡ ಶ್ರೇಷ್ಠ ನಾಯಕ, ಭಾರತದ ಮಾಜಿ ಉಪ ಪ್ರಧಾನಿಗಳಾದ ಡಾ.ಬಾಬು ಜಗಜೀವನ ರಾಮ್ ಅವರ 40ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮವನ್ನು ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದಲ್ಲಿ ಸೋಮವಾರ ಹಮ್ಮಿಕೊಳ್ಳಲಾಯಿತು.

ತಹಶೀಲ್ದಾರ ಡಾ.ವಿನಯಾ ಹೂಗಾರ ಹಾಗೂ ಕಾರ್ಯಕ್ರಮದ ಅಧ್ಯಕ್ಷರಾದ ಯಮನಪ್ಪ ಕಟ್ಟಿಮನಿ ಅವರು ದೀಪ ಪ್ರಜ್ವಲನೆ ಹಾಗೂ ಪುಷ್ಪಾರ್ಚನೆ ಮಾಡುವ ಮೂಲಕ ಮಹಾನಾಯಕನಿಗೆ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ತಹಸಿಲ್ದಾರ್



ಡಾ.ವಿನಯಾ ಹೂಗಾರ ಅವರು ತಮ್ಮ ನುಡಿ ನಮನಗಳಲ್ಲಿ ಭಾರತದ ಮಾಜಿ ಉಪ ಪ್ರಧಾನಿ ಹಾಗೂ ಸಾಮಾಜಿಕ ನ್ಯಾಯದ ಹರಿಕಾರರಾದ ಡಾ.ಬಾಬು ಜಗಜೀನ್ ರಾಮ್ ಅವರು ಬಿಟ್ಟುಹೋದ ಬದುಕಿನ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಲ್ಲಪ್ಪ ಶಿರೋಳ, ಪರಶುರಾಮ ಹೋಟಗಾರ, ದ್ಯಾಮಣ್ಣ ಸೋಮನಾಳ, ಬಸ್ಸು ಕಟ್ಟಿಮನಿ, ರಮೇಶ್ ಮಾದರ, ಕಾಶಿನಾಥ ಕಟ್ಟಿಮನಿ, ರಮೇಶ್ ದೋಡಮನಿ, ಹುಲಗಪ್ಪ ಕಟ್ಟಿಮನಿ, ಆಸೀಫ್ ಕೆಂಭಾವಿ, ಮಡು ಚಲವಾದಿ, ಗೋಪಾಲ ಕಟ್ಟಿಮನಿ, ಶೇಖಪ್ಪ ಕಾರಗಾನೂರ ಹಾಗೂ ತಹಶೀಲ್ದಾರರ ಕಚೇರಿ ಸಿಬ್ಬಂದಿಗಳು ಮತ್ತು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಸ್ರೋ ಕೇಂದ್ರ ಕಚೇರಿಗೆ ಬಾಂಬ್ ಬೆದರಿಕೆ




❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಇಸ್ರೋ ಕೇಂದ್ರ ಕಚೇರಿಗೆ ಬಾಂಬ್ ಬೆದರಿಕೆ ಇ–ಮೇಲ್ ಬಂದಿದ್ದು, ಕೆಲ ಕಾಲ ಆತಂಕದ ವಾತಾವರಣ ಉಂಟಾಗಿತ್ತು.ಸಂ–ಜಯನಗರ ಪೊಲೀಸ್ ಠಾಣೆ ವ್ಯಾಪ್ತಿಯ ಬಿಇಎಲ್ ರಸ್ತೆಯಲ್ಲಿರುವ ಇಸ್ರೋ ಕೇಂದ್ರ ಕಚೇರಿಗೆ ಬಾಂಬ್ ಇಡಲಾಗಿದೆ ಎಂಬ ಇ–ಮೇಲ್ ಅನ್ನು ರಾತ್ರಿ ದುಷ್ಕರ್ಮಿಗಳು ಕಳುಹಿಸಿದ್ದಾರೆ.

ಇಂದು ಬೆಳಗ್ಗೆ ಕಚೇರಿಗೆ ಬಂದ ಸಿಬ್ಬಂದಿ ಇ–ಮೇಲ್ ಪರಿಶೀಲಿಸುತ್ತಿದ್ದಾಗ ತಮಿಳು ಭಾಷೆಯಲ್ಲಿ ಬಾಂಬ್ ಬೆದರಿಕೆಯ ಇ–ಮೇಲ್ ಸಂದೇಶ ಗಮನಿಸಿ ಆತಂಕಗೊಂಡು ತಕ್ಷಣ ಪೊಲೀಸರಿಗೆ ವಿಷಯ ತಿಳಿಸಿದ್ದಾರೆ. ಸುದ್ದಿ ತಿಳಿದು ಸಂಜಯನಗರ ಠಾಣೆ ಪೊಲೀಸರು ಬಾಂಬ್ ಪತ್ತೆದಳ, ಬಾಂಬ್ ನಿಷ್ಕ್ರಿಯದಳ ಹಾಗೂ ಶ್ವಾನ ದಳದೊಂದಿಗೆ ಸ್ಥಳಕ್ಕೆ ದಾವಿಸಿ ಪರಿಶೀಲನೆ ನಡೆಸಿದಾಗ ಯಾವುದೇ ಬಾಂಬ್ ನಂತಹ ವಸ್ತುಗಳು ಪತ್ತೆಯಾಗಿಲ್ಲ. ಇಸ್ರೋ ಸಿಬ್ಬಂದಿ ನಿಟ್ಟುಸಿರುಬಿಟ್ಟಿದ್ದಾರೆ.


ಕಳೆದ ಒಂದು ವಾರದ ಹಿಂದೆಯೂ ಕೂಡ ಈ ಕೇಂದ್ರಕ್ಕೆ ಇದೇ ರೀತಿ ಬಾಂಬ್ ಬೆದರಿಕೆಯ ಇ–ಮೇಲ್ ಬಂದಿತ್ತು. ಆ ಸಂದರ್ಭದಲ್ಲಿ ಸಹ ಪೊಲೀಸರು, ಬಾಂಬ್ ಪತ್ತೆದಳ, ಬಾಂಬ್ ನಿಷ್ಕ್ರಿಯದಳ ಪರಿಶೀಲಿಸಿದಾಗ ಯಾವುದೇ ಸ್ಫೋಟಕದಂತಹ ವಸ್ತುಗಳು ಕಂಡು ಬಂದಿರಲಿಲ್ಲ. ಇದನ್ನು ಗಂಭೀರವಾಗಿ ಪರಿಗಣಿಸಿ ಇ–ಮೇಲೆ ಸಂದೇಶ ಎಲ್ಲಿಂದ ಬಂದಿದೆ ಎಂಬುವುದನ್ನು ಪೊಲೀಸರು ತನಿಖೆ ಕೈಗೊಂಡಾಗ ದೆಹಲಿಯ ಗಾಜೀಯಾಬಾದ್ ನಿಂದ ಬಂದಿರುವ ಬಗ್ಗೆ ಮಾಹಿತಿ ಕಲೆಹಾಕಿ ಒಂದು ತಂಡ ಅಲ್ಲಿಗೆ ಹೋಗಿ ಒಬ್ಬನನ್ನು ಪತ್ತೆಹಚ್ಚಿ ಬಂಧಿಸಿದ್ದಾರೆ. ಒಂದು ವಾರದೊಳಗೆ ಇದು ಎಡನೇ ಬಾರಿ ಬೆದರಿಕೆಯ ಸಂದೇಶ ಕಳುಹಿಸಿರುವುದು ಆತಂಕಕಾರಿಯಾಗಿದೆ.

ಪೀಣ್ಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇಸ್ರೋ ಕೇಂದ್ರದ ಶಾಖಾ ಕಚೇರಿ ಇದ್ದು, ಅಲ್ಲಿಯೂ ಸಹ ತಪಾಸಣೆ ಮಾಡಲಾಗಿದ್ದು ಏನೂ ಪತ್ತೆಯಾಗಿಲ್ಲ. ಇದು ಹುಸಿ ಸಂದೇಶ ಎಂಬುವುದು ಗೊತ್ತಾಗಿದೆ. ಈ ಸಂದೇಶವನ್ನು ಎಲ್ಲಿಂದ ಕಳುಹಿಸಲಾಗಿದೆ, ಯಾರು ಏತಕ್ಕಾಗಿ ಕಳುಹಿಸಿದ್ದಾರೆ ಎಂಬಿತ್ಯಾದಿ ಮಾಹಿತಿಗಳನ್ನು ಪೊಲೀಸರು ಕಲೆಹಾಕುತ್ತಿದ್ದಾರೆ.

# ಫಿಫಾ ವಿಶ್ವಕಪ್ : ಬ್ರೆಜಿಲ್‌ಗೆ ಆಘಾತ, ಕ್ವಾರ್ಟರ್‌ಫೈನಲ್‌ಗೆ ನಾರ್ವೆ ಲಗ್ಗೆ

❑ ನೈಜ್ಯ ದೆಸೆ ನ್ಯೂಸ್

ಈಸ್ಟ್ ರುದರ್‌ಫೋರ್ಡ್: ರ್ಲಿಂಗ್ ಹಾಲೆಂಡ್ ಅವರ ಅದ್ಭುತ ಎರಡು ಗೋಲುಗಳ ನೆರವಿನಿಂದ ನಾರ್ವೆ ತಂಡವು ಐದು ಬಾರಿಯ ಚಾಂಪಿಯನ್ ಬ್ರೆಜಿಲ್ ವಿರುದ್ಧ 2–1 ಗೋಲುಗಳಿಂದ ಜಯಿಸಿ, ಫಿಫಾವಿಶ್ವಕಪ್ ಫುಟ್‌ಬಾಲ್ ಟೂರ್ನಿಯ ಕ್ವಾರ್ಟರ್‌ಫೈನಲ್‌ಗೆ ಪ್ರವೇಶಿಸಿದೆ.



ಪಂದ್ಯದ ಬಹುಪಾಲು ಸಮಯ ಮಂಕಾಗಿದ್ದ ಹಾಲೆಂಡ್, ನಿರ್ಣಾಯಕ ಕ್ಷಣದಲ್ಲಿ ಮಿಂಚಿದರು. 80ನೇ ನಿಮಿಷದಲ್ಲಿ ಆಂಡ್ರಿಯಾಸ್ ಶೆಲ್ಡೆರುಪ್ ನೀಡಿದ ಅದ್ಭುತ ಪಾಸ್‌ಗೆ ಹೆಡರ್ ಮೂಲಕ ಗೋಲು ಗಳಿಸಿ ನಾರ್ವೆಗೆ ಮುನ್ನಡೆ ತಂದುಕೊಟ್ಟರು. ಬಳಿಕ ನಿಯಮಿತ ಅವಧಿ ಮುಕ್ತಾಯಕ್ಕೂ ಮುನ್ನ ಮತ್ತೊಂದು ಗೋಲು ದಾಖಲಿಸಿ ತಂಡದ ಗೆಲುವು ಖಚಿತಪಡಿಸಿದರು.

ವಿರಾಮದ ವೇಳೆ ಬದಲಿ ಆಟಗಾರನಾಗಿ ಕಣಕ್ಕಿಳಿದ ಶೆಲ್ಡೆರುಪ್, ಹಾಲೆಂಡ್ ಅವರ ಎರಡೂ ಗೋಲುಗಳಿಗೆ ಅಸಿಸ್ಟ್ ನೀಡಿದರು.ಈ ಟೂರ್ನಿಯಲ್ಲಿ ಹಾಲೆಂಡ್ ಅವರ ಗೋಲುಗಳ ಸಂಖ್ಯೆ ಏಳಕ್ಕೇರಿದ್ದು, ಅರ್ಜೆಂಟೀನಾದ ಲಿಯೋನೆಲ್ ಮೆಸ್ಸಿ ಹಾಗೂ ಫ್ರಾನ್ಸ್ ನ ಕೈಲಿಯನ್ ಎಂಬಾಪೆ ಅವರೊಂದಿಗೆ ಅಗ್ರ ಗೋಲು ಗಳಿಕೆ ಪಟ್ಟಿಯಲ್ಲಿ ಜಂಟಿ ಸ್ಥಾನ ಪಡೆದಿದ್ದಾರೆ. ಅಂತಾರಾಷ್ಟ್ರೀಯ ಸ್ಪರ್ಧಾತ್ಮಕ ಪಂದ್ಯಗಳಲ್ಲಿ ಸತತ 14 ಪಂದ್ಯಗಳಲ್ಲಿ ಗೋಲು ದಾಖಲಿಸಿದ ಸಾಧನೆಯನ್ನು ಹಾಲೆಂಡ್ ಮುಂದುವರಿಸಿದ್ದಾರೆ. ಈ ಅವಧಿಯಲ್ಲಿ ಅವರು 27 ಗೋಲುಗಳನ್ನುಗಳಿಸಿದ್ದು, ನಾರ್ವೆ ಪರ 54 ಪಂದ್ಯಗಳಲ್ಲಿ ಒಟ್ಟು 62 ಗೋಲುಗಳನ್ನು ದಾಖಲಿಸಿದ್ದಾರೆ.

ನಾರ್ವೆಯ ಗೋಲ್‌ಕೀಪರ್ ಓರ್ಜನ್ ನೈಲ್ಯಾಂಡ್ ಕೂಡ ತಂಡದ ಗೆಲುವಿನಲ್ಲಿ ಮಹತ್ವದ ಪಾತ್ರ ವಹಿಸಿದರು.ಪಂದ್ಯ ಆರಂಭದ 14ನೇ ನಿಮಿಷದಲ್ಲಿ ಬ್ರೆಜಿಲ್‌ಗೆ ಪೆನಾಲ್ಟಿ ಅವಕಾಶ ಸಿಕ್ಕಿತು ಆದರೆ ಬ್ರೂನೊ ಗಿಮರಾಯಿಸ್ ಗುಳು ಬಾರಿಸಲು ವಿಫಲರಾದರು ಅಂತಿಮ ಹಂತದಲ್ಲಿ ಕೂಡ ಎಂಡ್ರಿಕ್ ಅವರ ಅಪಾಯಕಾರಿ ಪ್ರಯತ್ನವನ್ನೂ ನೈಲ್ಯಾಂಡ್ ವಿಫಲಗೊಳಿಸಿದರು. ಹೆಚ್ಚುವರಿ ಸಮಯದಲ್ಲಿ ನೇಮರ್ ಪೆನಾಲ್ಟಿ ಮೂಲಕ ಬ್ರೆಜಿಲ್‌ಗೆ ಏಕೈಕ ಗೋಲು ಗಳಿಸಿದರೂ, ಅದು ಸೋಲಿನ ಅಂತರವನ್ನು ಮಾತ್ರ ಕಡಿಮೆ ಮಾಡಿತು.35 ವರ್ಷದ ನೈಲ್ಯಾಂಡ್ ನಾರ್ವೆ ತಂಡದ ಅತ್ಯಂತ ಹಿರಿಯ ಆಟಗಾರರಾಗಿದ್ದು, ಈ ಐತಿಹಾಸಿಕ ಗೆಲುವಿನ ಪ್ರಮುಖ ರೂವಾರಿಯಾಗಿದ್ದರು.

1995ರಲ್ಲಿ ನಾರ್ವೆಯ ಮಹಿಳಾ ತಂಡ ವಿಶ್ವಕಪ್ ಗೆದ್ದಿದ್ದರೂ, ಪುರುಷರ ತಂಡವು ಈವರೆಗೆ ಕೇವಲ ನಾಲ್ಕು ಬಾರಿ ಮಾತ್ರ ವಿಶ್ವಕಪ್‌ಗೆ ಅರ್ಹತೆ ಪಡೆದಿತ್ತು. 1998ರ ಬಳಿಕ ಮೊದಲ ಬಾರಿಗೆ ವಿಶ್ವಕಪ್ ಆಡುತ್ತಿರುವ ನಾರ್ವೆ, ಈ ಬಾರಿ ಮೊದಲ ಬಾರಿಗೆ ಕ್ವಾರ್ಟರ್‌ಫೈನಲ್‌ಗೆ ತಲುಪಿದೆ. ಈ ನಡುವೆ ಬ್ರೆಜಿಲ್ ಪರ ಬ್ರೂನೊ ಗಿಮರಾಯಿಸ್ ಪೆನಾಲ್ಟಿ ತಪ್ಪಿಸಿದ ಮೊದಲ ಆಟಗಾರ ಎಂಬ ಅನಪೇಕ್ಷಿತ ದಾಖಲೆಗೆ ಪಾತ್ರರಾದರು.ಐದು ಬಾರಿ ವಿಶ್ವಕಪ್ ಗೆದ್ದಿರುವ ಬ್ರೆಜಿಲ್, 1990ರ ಬಳಿಕ ಮೊದಲ ಬಾರಿಗೆ ಕ್ವಾರ್ಟರ್‌ಫೈನಲ್‌ಗೂ ಮುನ್ನವೇ ಟೂರ್ನಿಯಿಂದ ಹೊರಬಿದ್ದಿದೆ. ಅಲ್ಲದೆ ವಿಶ್ವಕಪ್‌ನಲ್ಲಿ ಯುರೋಪಿನ ತಂಡಗಳ ವಿರುದ್ಧ ಇದು ಬ್ರೆಜಿಲ್‌ಗೆ ಸತತ ಏಳನೇ ಸೋಲಾಗಿದೆ. 2002ರ ಫೈನಲ್‌ನಲ್ಲಿ ಜರ್ಮನಿಯನ್ನು ಮಣಿಸಿದ ಬಳಿಕ ಯುರೋಪಿನ ತಂಡದ ವಿರುದ್ಧ ವಿಶ್ವಕಪ್‌ನಲ್ಲಿ ಬ್ರೆಜಿಲ್ ಗೆಲುವು ಸಾಧಿಸಿಲ್ಲ.

ಗಾಯಗೊಂಡಿದ್ದ ಜೂಲಿಯನ್ ರಿಯರ್ಸನ್ ತಂಡಕ್ಕೆ ಮರಳಿದ್ದು, ವಿರಾಮದ ವೇಳೆ ಮಾಡಿದ ಬದಲಾವಣೆಗಳು ನಾರ್ವೆಯ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದವು.80,663 ಪ್ರೇಕ್ಷಕರ ಸಮುಖದಲ್ಲಿ ನಡೆದ ಪಂದ್ಯವನ್ನು ರಾಪರ್ ಜೇ–ಝಡ್, ಹಾಸ್ಯನಟ ಕ್ರಿಸ್ ರಾಕ್, ನಟ ವುಡಿ ಹ್ಯಾರೆಲ್ಸನ್, ನಟಿ ಸೋಫಿಯಾ ವರ್ಗಾರಾ ಹಾಗೂ ಎನ್‌ಬಿಎ ಚಾಂಪಿಯನ್ ತಂಡದ ಆಟಗಾರ ಜೇಲೆನ್ ಬ್ರನ್ಸನ್ ಸೇರಿದಂತೆ ಹಲವು ಗಣ್ಯರು ವೀಕ್ಷಿಸಿದರು. ಕ್ವಾರ್ಟರ್‌ಫೈನಲ್‌ನಲ್ಲಿ ನಾರ್ವೆ ತಂಡ ಇಂಗ್ಲೆಂಡ್ ವಿರುದ್ಧ ಸೆಣಸಲಿದೆ. ಬ್ರೆಜಿಲ್‌ಗೆ ಇದು ಆಘಾತ ನೀಡಿದ್ದು ಕೋಟ್ಯಾಂತರ ಅಭಿಮಾನಿಗಳು ನಿರಾಸೆಗೊಂಡಿದ್ದಾರೆ.ತಂಡ ಆಘಾತಕಾರಿ ಸೋಲು ಕಂಡ ಬೆನ್ನಲ್ಲೇ ಸ್ಟಾರ್ ಆಟಗಾರ ನೇಮರ್ ಅಂತಾರಾಷ್ಟ್ರೀಯ ಫುಟ್‌ಬಾಲ್ ವೃತ್ತಿ ಜೀವನಕ್ಕೆ ವಿದಾಯ ಘೋಷಿಸಿದ್ದಾರೆ.

ಬ್ರೆಜಿಲ್ ಪರ ಸಾರ್ವಕಾಲಿಕ ಗರಿಷ್ಠ ಗೋಲುಗಳನ್ನುಗಳಿಸಿದ ದಾಖಲೆಯೊಂದಿಗೆ ನೇಮರ್ ವಿದಾಯ ಘೋಷಿಸಿದ್ದಾರೆ. ಪಂದ್ಯದ ಸೋಲಿನ ಬೆನ್ನಲ್ಲೇ ಭಾವುಕರಾದ ನೇಮರ್ ತಮ 16 ವರ್ಷಗಳ ಸುದೀರ್ಘ ಅಂತಾರರಾಷ್ಟ್ರೀಯ ವೃತ್ತಿಜೀವನಕ್ಕೆ ತೆರೆ ಎಳೆದರು.

# ವ್ಯಾಪಕ ಮಳೆಯಿಂದ ಬೆಳೆ ನಾಶ, ಈರುಳ್ಳಿ ಬೆಲೆ ಏರಿಕೆ

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಕಳೆದ ಕೆಲವು ತಿಂಗಳುಗಳಿಂದ ಈರುಳ್ಳಿ ಬೆಲೆಯಲ್ಲಿ ಸ್ಥಿರತೆ ಕಾಯ್ದುಕೊಂಡಿದ್ದು, ಸದ್ದಿಲ್ಲದೆ ದಿನದಿಂದ ದಿನಕ್ಕೆ ಏರುತ್ತಿದ್ದು, ಗ್ರಾಹಕರ ಕಣ್ಣಲ್ಲಿ ನೀರು ತರಿಸುತ್ತಿದೆ. ಉತ್ತರ ಕರ್ನಾಟಕ ಹಾಗೂ ಮಹಾರಾಷ್ಟ್ರ ಭಾಗದಲ್ಲಿ ವ್ಯಾಪಕ ಮಳೆಯಾಗುತ್ತಿರುವುದರಿಂದ ಬೆಳೆ ನಾಶವಾಗಿದ್ದು, ಮಾರುಕಟ್ಟೆಗೆ ನಿರೀಕ್ಷಿತ ಪ್ರಮಾಣದಲ್ಲಿ ಮಾಲು ಬಾರದಿರುವುದರಿಂದ ಬೆಲೆ ಏರಿಕೆಗೆ ಕಾರಣವಾಗಿದೆ.



ರಾಜ್ಯದಲ್ಲೇ ಹೆಚಾಗಿ ಈರುಳ್ಳಿ ಬೆಳೆಯುವ ಪ್ರದೇಶಗಳಾದ ಬೆಳಗಾವಿ, ಬಳ್ಳಾರಿ, ರಾಯಚೂರು, ಧಾರವಾಡ, ದಾವಣಗೆರೆ ಜಿಲ್ಲೆಗಳಲ್ಲಿ ಮಳೆ ಕೈಕೊಟ್ಟ ಕಾರಣ ಬಿತ್ತನೆ ವಿಳಂಬವಾಗಿದ್ದು, ಉತ್ಪಾದನೆ ಕುಂಠಿತವಾದ ಹಿನ್ನೆಲೆಯಲ್ಲಿ ಬೆಲೆ ಏರಿಕೆಗೆ ಕಾರಣ ಒಂದೆಡೆಯಾದರೆ ರಾಜ್ಯಕ್ಕೆ ಹೆಚ್ಚಾಗಿ ಈರುಳ್ಳಿ ಸರಬರಾಜಾಗುವ ಮಹಾರಾಷ್ಟ್ರದಲ್ಲಿ ಇದೀಗ ಮಳೆಯ ಪ್ರಮಾಣ ಹೆಚ್ಚಾಗಿದ್ದರಿಂದ ಬೆಳೆ ನಾಶವಾಗಿದ್ದು, ಬೆಲೆ ಹೆಚ್ಚಳಕ್ಕೆ ಕಾರಣವಾಗಿದೆ.

ಕಳೆದ ಕೆಲವು ತಿಂಗಳುಗಳಿಂದ ಗುಣಮಟ್ಟದ ಈರುಳ್ಳಿ ಕೆಜಿಗೆ 25 ರೂ.ಗಳಿಂದ 30 ರೂ.ಗೆ ಮಾರಾಟವಾಗುತ್ತಿತ್ತು. ಕಳೆದ ವಾರದಿಂದ ಕೆಜಿಗೆ ದಿಢೀರನೇ 45 ರಿಂದ 50 ರೂ.ಗೆ ಮಾರಾಟವಾಗುತ್ತಿದೆ.ಬೆಂಗಳೂರು ಸೇ–ರಿದಂತೆ ವಿವಿಧ ಜಿಲ್ಲೆಗಳಲ್ಲಿ ಚಿಲ್ಲರೆಯಾಗಿ 100 ರೂ.ಗೆ ಎರಡೂವರೆಯಿಂದ ಮೂರು ಕೆಜಿ ಈರುಳ್ಳಿ ಮಾರಾಟ ಮಾಡಲಾಗುತ್ತಿದೆ. ಇದ–ರಿಂದ ಗ್ರಾಹಕರಿಗೆ ಹೊರೆಯಾಗಿದ್ದು, ಖರೀದಿ ಮಾಡುವಾಗ ಕಣ್ಣಲ್ಲಿ ನೀರು ಬರುವಂತಾಗಿದ್ದು, ಮಿತ ಬಳಕೆ ಮಾಡುವಂತಾಗಿದೆ.

ಮುಂಗಾರು ವಿಳಂಬವಾದ್ದರಿಂದ ಬಿತ್ತನೆ ಕಾರ್ಯ ಕುಂಠಿತವಾಗಿದ್ದು, ದಾಸ್ತಾನು ಮಾಡಲಾಗಿದ್ದ ಮಾಲು ಮಾತ್ರ ಇದುವರೆಗೂ ಮಾರುಕಟ್ಟೆಗೆ ಪೂರೈಕೆಯಾಗುತ್ತಿದ್ದು, ಹೊಸ ಈರುಳ್ಳಿ ಮಾರುಕಟ್ಟೆಗೆ ಬರುವವರೆಗೂ ಬೆಲೆ ಹೆಚ್ಚಾಗುವ ಸಾಧ್ಯತೆ ಇದೆ ಎಂದು ವ್ಯಾಪಾರಿಗಳು ತಿಳಿಸಿದ್ದಾರೆ. ಜೊತೆಗೆ ಮೋಡ ಕವಿದ ವಾತಾವರಣವಿದ್ದು, ದಾಸ್ತಾನಿನಲ್ಲಿ ಈರುಳ್ಳಿ ಕೊಳೆಯುತ್ತಿದ್ದು, ಗುಣಮಟ್ಟದ ಈರುಳ್ಳಿ ಮಾರುಕಟ್ಟೆಗೆ ಬಾರದ ಹಿನ್ನೆಲೆಯಲ್ಲಿ ಬೆಲೆ ಹೆಚ್ಚಳವಾಗಿದೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101